ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 156

ಬೆಲೆ ರೂ : 2.00

ರಾಯಚೂರು

ಪುಟ: 4

DAIRYADA DAARI

RNI NO: KNKAN/25/A2795 ಶುಕ್ರವಾರ: 29-05-2026

# ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ಸಲ್ಲಿಕೆ

**ಬೆಂಗಳೂರು, ಮೇ 28–** ರಾಜ್ಯಪಾಲರ ಅನುಪಸ್ಥಿತಿಯಲ್ಲಿ ಸಿದ್ದರಾಮಯ್ಯ ಅವರು ಲೋಕಭವನ ಕಚೇರಿಗೆ ತೆರಳಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಅನ್ಯರಾಜ್ಯಗಳ ಪ್ರವಾಸದಲ್ಲಿದ್ದಾರೆ. ಸಿದ್ದರಾಮಯ್ಯ ಅವರು ಇಂದು ಬೆಳಗ್ಗೆ ಸಂಪುಟದ ಎಲ್ಲಾ ಸಚಿವರೊಂದಿಗೆ ಉಪಾಹಾರ ಕೂಟ ನಡೆಸಿದ ಬಳಿಕ ರಾಜೀನಾಮೆ ನಿರ್ಧಾರವನ್ನು ಪ್ರಕಟಿಸಿದ್ದು, ಅದರಂತೆ ತಮ್ಮ ರಾಜೀನಾಮೆಯನ್ನು ಲೋಕ ಭವನಕ್ಕೆ ತಲುಪಿಸಿದ್ದಾರೆ.



ರಾಜ್ಯಪಾಲರ ಅನುಪಸ್ಥಿತಿಯಿಂದಾಗಿ ರಾಜೀನಾಮೆ ಅಂಗೀಕಾರಗೊಳ್ಳುವ ಬಗ್ಗೆ ಗೊಂದಲಗಳು ಏರ್ಪಟ್ಟಿವೆ. ಹೈಕಮಾಂಡ್‌ನ ಸೂಚನೆ ಮೇರೆಗೆ ಸಿದ್ದರಾಮಯ್ಯ ಅವರು ಹುದ್ದೆ ತ್ಯಾಗ ಮಾಡಿದ್ದಾರೆ.

**ಡಿ.ಕೆ.ಶಿವಕುಮಾರ್‌ಗೆ ಪಟ್ಟ:** ಮುಂದಿನ ನಾಯಕತ್ವದ ಬಗ್ಗೆ ಸಾಕಷ್ಟು ಚರ್ಚೆಗಳಾಗಿವೆ. ಪ್ರಸ್ತುತ ಸನ್ನಿವೇಶದಲ್ಲಿ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗುವುದು ಬಹುತೇಕ ಖಚಿತವಾಗಿದೆ. ಇದಕ್ಕಾಗಿ ಈಗಾಗಲೇ ವೇದಿಕೆಗಳು ಸಿದ್ಧಗೊಳ್ಳುತ್ತಿವೆ. ನಗರದ ಎಲ್ಲೆಡೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಅಭಿನಂದನೆಗಳು ಎಂಬ ಪೋಸ್ಟರ್‌ಗಳು, ಬಂಟಿಂಗ್ಸ್ ಗಳು, ರಾರಾಜಿಸುತ್ತಿವೆ.

ಮಂಗಳವಾರದಿಂದಲೇ ಡಿ.ಕೆ.ಶಿವಕುಮಾರ್ ಅವರ ತವರು ಕ್ಷೇತ್ರ ಕನಕಪುರ, ಬೆಂಗಳೂರು ದಕ್ಷಿಣ ಜಿಲ್ಲೆ ಮತ್ತು ಸದಾಶಿವನಗರದ ಅವರ ಮನೆಯ ಮುಂದೆ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದ್ದಾರೆ.

**ಸಿದ್ದರಾಮಯ್ಯ ಪರೋಕ್ಷ ಸಂದೇಶ:** ಇಂದು ಉಪಾಹಾರ ಕೂಟದಲ್ಲಿ ಸಿದ್ದರಾಮಯ್ಯ ಅವರು ತಮ ಬಲಗಡೆ ಡಿ.ಕೆ.ಶಿವಕುಮಾರ್ ಅವರನ್ನು, ಎಡಗಡೆ ಗೃಹ ಸಚಿವ ಪರಮೇಶ್ವರ್‌ರವನ್ನು ಕೂರಿಸಿಕೊಳ್ಳುವ ಮೂಲಕ ನಾಯಕತ್ವ ನಿರ್ಧಾರ ಸುಲಭವಲ್ಲ ಎಂಬ ಮುನ್ಸೂಚನೆ ನೀಡಿದ್ದಾರೆ. ತಮ ನಂತರದಲ್ಲಿ ಪರಿಶಿಷ್ಟ ಜಾತಿಗೆ ಅವಕಾಶ ನೀಡಬೇಕೆಂದು ಡಿ.ಕೆ.ಶಿವಕುಮಾರ್ ಹೈಕಮಾಂಡ್ ಮುಂದೆ ಪ್ರತಿಪಾದನೆ ಮಾಡಿರುವುದಾಗಿ ತಿಳಿದು ಬಂದಿದೆ.

ಈ ಹಿನ್ನೆಲೆಯಲ್ಲಿ ಎಚ್.ಕೆ.ಪಾಟೀಲ್, ಕೆ.ಜೆ.ಜಾರ್ಜ್, ಕೆ.ಎಚ್.ಮುನಿಯಪ್ಪ ಅವರಂತಹ ಹಿರಿಯರನ್ನು ಬದಿಗೆ ಕೂರಿಸಿ ಪರಮೇಶ್ವರ್ ಅವರನ್ನು ಪಕ್ಕದಲ್ಲೆ ಇರುವಂತೆ ಮುಖ್ಯಮಂತ್ರಿ ನೋಡಿಕೊಂಡಿರುವುದು ರಾಜಕೀಯವಾಗಿ ನಾನಾ ರೀತಿಯ ಸಂದೇಶ ರವಾನಗೆ ಕಾರಣವಾಗಿದೆ.

# ಪ್ರಮಾಣ ವಚನಕ್ಕೆ ಡಿಕೆಶಿ ಭಾರೀ ಸಿದ್ಧತೆ



**ಬೆಂಗಳೂರು, ಮೇ 28–** ಮುಂದಿನ ಮುಖ್ಯಮಂತ್ರಿಯಾಗಲಿರುವ ಡಿ.ಕೆ.ಶಿವಕುಮಾರ್ ಅವರು ಪ್ರಮಾಣವಚನ ಸ್ವಿಕಾರಕ್ಕೆ ಭಾರೀ ತಯಾರಿ ನಡೆಸಿದ್ದಾರೆ. ಮುಖ್ಯಮಂತ್ರಿಯವರ ಅಧಿಕೃತ ನಿವಾಸ ಕಾವೇರಿಯಲ್ಲಿ ಸಿದ್ದರಾಮಯ್ಯ ಅವರು, ಸಂಪುಟದ ಎಲ್ಲಾ ಸಚಿವರಿಗೂ ಉಪಾಹಾರ ಕೂಟ ಏರ್ಪಡಿಸಿ ತಮ ರಾಜೀನಾಮೆಯನ್ನು ಪ್ರಕಟಿಸಿದರು. ಜೊತೆಯಲ್ಲೆ ಡಿ.ಕೆ.ಶಿವಕುಮಾರ್ ಮುಂದಿನ ಮುಖ್ಯಮಂತ್ರಿ ಎಂದು ಘೋಷಿಸಿದರು.

ಇದಕ್ಕೂ ಮುನ್ನ ಡಿ.ಕೆ.ಶಿವಕುಮಾರ್ ಅವರು ಸಿದ್ದರಾಮಯ್ಯ ಅವರ ಜೊತೆ ಖಾಸಗಿಯವಾಗಿ ಕೆಲ ಹೊತ್ತು ಮಾತುಕತೆ ನಡೆಸಿದರು. ಉಪಾಹಾರ ಕೂಟ ಮುಗಿಸಿ 2ನೇಪುಟಕ್ಕೆ►

## ಎಸ್‌ಐಆರ್ ವಿರೋಧಿ ಸಮಾವೇಶಕ್ಕೆ ವೆಲ್ಫೇರ್ ಪಾರ್ಟಿ ಬೆಂಬಲ

ಧೈರ್ಯದ ದಾರಿ



**ರಾಯಚೂರು, ಮೇ 28:** ಇದೇ ತಿಂಗಳ 30ರಂದು ರಾಯಚೂರು ನಗರದಲ್ಲಿ ಜಿಲ್ಲೆಯಾದ್ಯಂತ ನಡೆಯಲಿರುವ ಎಸ್‌ಐಆರ್ (SIR) ವಿರೋಧಿ ಸಾಮೂಹಿಕ ಪ್ರತಿಭಟನೆ ಹಾಗೂ ವಿರೋಧಿ ಸಮಾವೇಶಕ್ಕೆ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ, ರಾಯಚೂರು ಜಿಲ್ಲೆ ಸಂಪೂರ್ಣ ಬೆಂಬಲ ಘೋಷಿಸಿದೆ.


ಈ ಕುರಿತು ಜಿಲ್ಲಾ ಅಧ್ಯಕ್ಷರಾದ ಶೇಖ್ ಫರೀದ್ ಉಮರಿ ಪ್ರಕಟಣೆ ನೀಡಿ, ರಾಜ್ಯದ ವಿವಿಧ ಜನಪರ ಸಂಘಟನೆಗಳು, ಸಾಮಾಜಿಕ ಹೋರಾಟಗಾರರು, ಪ್ರಗತಿಪರ ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರು ಒಗ್ಗೂಡಿ ಜನವಿರೋಧಿ ನೀತಿಗಳ ವಿರುದ್ಧ ಧ್ವನಿ ಎತ್ತುತ್ತಿರುವುದು ಪ್ರಜಾಪ್ರಭುತ್ವದ ಆರೋಗ್ಯಕರ ಬೆಳವಣಿಗೆಯಾಗಿದೆ ಎಂದು ಹೇಳಿದರು. ಜನರ ಹಕ್ಕುಗಳಿಗೆ ಧಕ್ಕೆ ಉಂಟುಮಾಡುವ ಯಾವುದೇ ಕ್ರಮಗಳ ವಿರುದ್ಧ ಸಂಘಟಿತ ಹೋರಾಟ ಅಗತ್ಯವಾಗಿದ್ದು, ಈ ಹಿನ್ನಲೆಯಲ್ಲಿ ನಡೆಯಲಿರುವ ಪ್ರತಿಭಟನೆ ಹಾಗೂ ವಿರೋಧಿ ಸಮಾವೇಶಕ್ಕೆ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ತನ್ನ ನೈತಿಕ ಹಾಗೂ ರಾಜಕೀಯ ಬೆಂಬಲವನ್ನು ಘೋಷಿಸುತ್ತಿದೆ ಎಂದು ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲಾ ಜನಪರ ಶಕ್ತಿಗಳು, ಯುವಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

**–ಶೇಖ್ ಫರೀದ್ ಉಮರಿ**

**ಜಿಲ್ಲಾ ಅಧ್ಯಕ್ಷರು( ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ, ರಾಯಚೂರು ಜಿಲ್ಲೆ)**

# ತ್ಯಾಗ ಬಲಿದಾನದ ಹಬ್ಬ ಬಕ್ರೀದ್



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನಲ್ಲಿ ತ್ಯಾಗ ಬಲಿದಾನದ ಹಬ್ಬವಾದ ಬಕ್ರೀದ್ ಹಬ್ಬವನ್ನು ಮುಸ್ಲಿಂ ಸಮುದಾಯದವರು ಸಂಭ್ರಮದಿಂದ ಆಚರಿಸಿದರು ಬೆಳಿಗ್ಗೆ ಪಟ್ಟಣದ ಸಿಂಧನೂರು ರಸ್ತೆಯಲ್ಲಿನ ಈದ್ಗಾ ಮೈದಾನದಲ್ಲಿ ಮುಸ್ಲಿಂ ಧರ್ಮಗುರುಗಳ ನೇತೃತ್ವದಲ್ಲಿ ಪಟ್ಟಣದ ಸಾವಿರಾರು ಮುಸ್ಲಿಂ ಸಮುದಾಯದವವರು ಸಾಮೂಹಿಕ ವಿಶೇಷ ಪ್ರಾರ್ಥನೆಯನ್ನು ಸಲ್ಲಿಸಿ ನಂತರ ಪರಸ್ಪರ ಬಕ್ರೀದ್ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಶಾಸಕ ಹಂಪಯ್ಯನಾಯಕ ಮುಸ್ಲಿಂ ಭಾಂದವರಿಗೆ ಬಕ್ರೀದ್ ಹಬ್ಬದ ಶುಭಾಶಯವನ್ನು ತಿಳಿಸಿದರು.

ಮಾನ್ವಿ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್‌ಗಫೂರ್‌ಸಾಬ್,ತಾಲೂಕು ಪಂಚ ಗ್ಯಾರಂಟಿಗಳ ಅಧ್ಯಕ್ಷರಾದ ಬಿ.ಕೆ.ಅಂಬರೇಶಪ್ಪ ವಕೀಲರು, ಮುಖಂಡರಾದ ಮಹಾಂತೇಶ ಸ್ವಾಮಿರೌಡೂರು, ಸಿದ್ದರಾಮಪ್ಪ ನಿರಮಾನ್ವಿ, ರಾಜ ಸುಭಾಷ್ ಚಂದ್ರ ನಾಯಕ್, ಶಿವರಾಜ ನಾಯಕ ವಕೀಲರು, ರೇವಣಸಿದ್ದಯ್ಯ ಸ್ವಾಮಿ,ಡಿ ವೀರೇಶ್, ಶಿವಪ್ಪಗೌಡ ಹಳ್ಳಿಹೊಸೂರು, ಅಮರೇಶ ಚಿಂಚಲ್, ಸತ್ತರ್ ಬಂಗ್ಲೆವಾಲೆ, ಸೂರ್ಯನಾರಾಯಣ ಯಾದವ್, ಅಬ್ಬು ಪಟೇಲ್, ಕನಕಪ್ಪ ಯಾದವ್, ವಿಜಯಕುಮಾರ್ ಗೌಡ,ಕಾಮೇಶ್ ಮಂದಕಲ್, ಹಂಪಯ್ಯ ನಾಯಕ್ ಬೆಳಗನಪೇಟ್, ಮಲ್ಲಯ್ಯ ಸ್ವಾಮಿ ಅಮರಾವತಿ, ನರಸಿಂಹ ಹೇಳವರ, ಯಲ್ಲಪ್ಪ ಕೊಟ್ನೆಕಲ್ ಸೇರಿದಂತೆ ಇನ್ನಿತರರು ಇದ್ದರು.

# "ಡೀಸೆಲಗಾಗಿ ರೈತರ ಪರದಾಟ"



ಧೈರ್ಯದ ದಾರಿ

**ಮಾನ್ವಿ:** ತಾಲ್ಲೂಕಿನಲ್ಲಿ ಮುಂಗಾರು ಬಿತ್ತನೆಗಾಗಿ ಕೃಷಿ ಚಟುವಟಿಕೆಗಳನ್ನು ಆರಂಭಿಸಿರುವ ರೈತರು ಡೀಸೆಲ್‌ಗಾಗಿ ಪರದಾಡುವಂತಾಗಿದೆ.

ಪಟ್ಟಣ ಸೇರಿದಂತೆ ತಾಲ್ಲೂಕಿನ ಗ್ರಾಮೀಣ ಭಾಗದ ಪೆಟ್ರೋಲ್ ಬಂಕ್‌ಗಳಲ್ಲಿ ಮಂಗಳವಾರ ಡೀಸೆಲ್ ಕೊರತೆ ಕಂಡುಬಂದಿತು. ಕಾರಣ ತಮ್ಮ ವಾಹನಗಳು ಹಾಗೂ ಕ್ಯಾನ್‌ಗಳ ಜೊತೆಗೆ ಪಟ್ಟಣದ ಪೆಟ್ರೋಲ್ ಬಂಕ್‌ಗಳಿಗೆ ಧಾವಿಸಿದ್ದ ನೂರಾರು ರೈತರು ಮಧ್ಯರಾತ್ರಿಯವರೆಗೂ ಡೀಸೆಲ್‌ಗಾಗಿ ಕಾದ ಘಟನೆ ನಡೆಯಿತು.

ಟ್ರ್ಯಾಕ್ಟರ್, ಪಂಪ್‌ಸೆಟ್ ಹಾಗೂ ಕೃಷಿ ಯಂತ್ರೋಪಕರಣಗಳಿಗೆ ಡೀಸೆಲ್ ಅವಶ್ಯಕವಾಗಿರುವ ಕಾರಣ ರೈತರು ಹಲವು ಗಂಟೆಗಳ ಕಾಲ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಡೀಸೆಲ್ ದರ ಹೆಚ್ಚಳ ಹಾಗೂ ಕೆಲ ಪೆಟ್ರೋಲ್ ಬಂಕ್‌ಗಳಲ್ಲಿ ಡೀಸೆಲ್ ಸೀಮಿತ ಪ್ರಮಾಣದಲ್ಲಿ ವಿತರಿಸುತ್ತಿರುವುದು ರೈತರ ಆತಂಕಕ್ಕೆ ಕಾರಣವಾಗಿದೆ.

'ಉತ್ತಮ ಮಳೆಯಿಂದಾಗಿ ಕೃಷಿ ಚಟುವಟಿಕೆ ಆರಂಭಿಸಲಾಗಿದೆ. ಡೀಸೆಲ್ ಬೆಲೆ ಏರಿಕೆಯಾಗಿದ್ದರಿಂದ ಟ್ರ್ಯಾಕ್ಟರ್ ಬಾಡಿಗೆ ಹೆಚ್ಚಾಗಿದೆ. 800 ಬಾಡಿಗೆ, ಡ್ರೈವರ್ ಭತ್ಯೆ 100 ನೀಡಬೇಕು. ಸರ್ಕಾರ ಮುಂಗಾರು ಬಿತ್ತನೆ ವೇಳೆ ಡೀಸೆಲ್ ಬೆಲೆ ಹೆಚ್ಚಳ ಮಾಡಿದ್ದರಿಂದ ರೈತರು ತೊಂದರೆ ಅನುಭವಿಸಬೇಕಾಗಿದೆ' ಎಂದು ನೀರಮಾನ್ವಿ ಗ್ರಾಮದ ರೈತ ಅಮರೇಶ ಅಸಮಾದಾನ ವ.ಕ ಪಡಿಸಿದರು.

**ಹಟ್ಟಿ ಚಿನ್ನದ ಗಣಿ:** ಪಟ್ಟಣದಲ್ಲಿ ಕಳೆದ ಮೂರು ದಿನಗಳಿಂದ ಪೆಟ್ರೋಲ್ ಬಂಕ್‌ಗಳಲ್ಲಿ ಇಂಧನ ಕೊರತೆ ಎದುರಾಗಿದ್ದು, ವಾಹನ ಸವಾರರು ಪರದಾಡುತ್ತಿದ್ದಾರೆಪಟ್ಟಣದಲ್ಲಿರುವ ಮೂರೂ ಪೆಟ್ರೋಲ್ ಬಂಕ್‌ಗಳಲ್ಲಿಯೂ ಸಮಸ್ಯೆ ತಲೆ ಎತ್ತಿದೆ. ರಸ್ತೆ ಮೇಲೆ ವಾಹನಗಳ ಓಡಾಟಕ್ಕೂ ಬ್ರೇಕ್ ಬಿದ್ದಿದೆ. ಯಾವುದೇ ಬಂಕ್‌ಗೆ ತೆರಳಿದರೂ ಸರದಿ ಸಾಲಿನ ಜೊತೆಯಲ್ಲಿ ಡೀಸೆಲ್ ತುಂಬಿಸಿಕೊಳ್ಳಲು ಕ್ಯಾನ್‌ಗಳನ್ನು ಹಿಡಿದು ಜನ ಮುಗಿ ಬಿದ್ದಿರುವುದು ಕಂಡು ಬರುತ್ತದೆ.

ಆನ್ವರಿ, ಗೆಜ್ಜಲಗಟ್ಟಾ, ಗುರುಗುಂಟಾ, ಯಲಗಟ್ಟಾ, ಮಾಚನೂರು, ಗೌಡೂರು, ನಿಲೋಗಲ್, ರೋಡಲಬಂಡ ಸೇರಿದಂತೆ ಪಕ್ಕದ ಹಳ್ಳಿಗಳ ರೈತರೂ ಇಂಧನಕ್ಕೆ ಪಟ್ಟಣವನ್ನೇ ಅವಲಂಬಿಸಿದ್ದಾರೆ. ರೈತರು ಕವಿತಾಳ ಪಟ್ಟಣ, ಲಿಂಗಸುಗೂರು, ಸಿರವಾರ, ದೇವದುರ್ಗ ತಾಲ್ಲೂಕುಗಳಿಗೆ ಬೈಕ್‌ನಲ್ಲಿ ತೆರಳಿ ಡೀಸೆಲ್ ತರುತ್ತಿದ್ದಾರೆ.ವಾಹನ ಸವಾರರು ಸರದಿ ಸಾಲಿನಲ್ಲಿ ಕಿ.ಮೀಗಟ್ಟಲೇ ರಸ್ತೆ ಮೇಲೆ ನಿಲ್ಲುತ್ತಿರುವುದು ಸಾಮಾನ್ಯವಾಗಿದೆ. ಇದರಿಂದ ಸಾರ್ವಜನಿಕರು ಇಂಧನ ಪಡೆಯಲು ಹರಸಾಹಸ ಪಡುತ್ತಿದ್ದಾರೆ ಎನ್ನುತ್ತಾರೆ ಸಾರ್ವಜನಿಕರು.

**ಬಂಕ್ ಬಂದ್:** ಇಂಧನ ಇಲ್ಲದ ಕಾರಣ ಪಟ್ಟಣದ ಮೂರು ಬಂಕ್‌ಗಳನ್ನು ಬಂದು ಮಾಡಲಾಗಿದೆ. ಜನರು ವಿಚಾರಿಸಿದರೆ, ನಾಳೆ ಬನ್ನಿ ಎಂದು ಬಂಕ್ ಸಿಬ್ಬಂದಿ ಸಬೂಬು ಹೇಳಿ ಸಾಗ ಹಾಕುತ್ತಿದ್ದಾರೆ.

# ರಂಗಭೂಮಿಯ ನೃತ್ಯಗಾರರನ್ನು ಕಲಾವಿದರನ್ನು ಪ್ರೋತ್ಸಾಹಿಸಿ ಬೆಳೆಸಬೇಕು ಡಾ .ಬಿರಾದಾರ

ಧೈರ್ಯದ ದಾರಿ

**ರಾಯಚೂರು:** ನಗರದ ಓಂ ಸಾಯಿ ಧ್ಯಾನ ಮಂದಿರದಲ್ಲಿ ಶ್ರೀ ದುರ್ಗಾ ಶಕ್ತಿ ನಾಟ್ಯ ಸಂಘ ಗೋಕಾಕ್ ಶ್ರೀ ಸಂಗಮೇಶ್ವರ ಸಂಸ್ಕೃತಿಕ ಹಾಗೂ ನಾಟ್ಯ ಸಂಘ ಗುಲೆದು ಗುಡ್ .ಜ್ಯೋತಿ ಬಳ್ಳಾರಿ ಇವರ ಸಂಯುಕ್ತ ಆಶ್ರಯದಲ್ಲಿ ದಿನಾಂಕ 31.05.2026ರಂದು ರವಿವಾರ ಸಂಜೆ 6 ಗಂಟೆಗೆ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ .ಹೌದಲೇ ರಂಗಿ. ಉದಲೇನೆ ಪುಂಗಿ ಅರ್ಥಾತ್ ಮಗ ಹೋದರು ಮಾಂಗಲ್ಯ ಬೇಕು .ಒಂದೇ ದಿನದ .ಒಂದು ನಾಟಕ ಪ್ರದರ್ಶನದ ಕರಪತ್ರವನ್ನು ದಿನಾಂಕ 28.05.20 25 ರಂದು ಓಂ ಸಾಯಿ ಮಂದಿರದ ಧರ್ಮಾಧಿಕಾರಿಗಳಾದ ಸಾಯಿಕಿರಣ ಆದೊನಿ ಗುರೂಜಿ ಬಿಡುಗಡೆ ಮಾಡಿದರು .




ನಂತರ ಅವರು ಮಾತನಾಡುತ್ತ. ನಾಟಕದ ನೃತ್ಯಗಾರರ ಮತ್ತು ಕಲಾವಿದರನ್ನು ಪ್ರತಿಯೊಬ್ಬ ಅಭಿಮಾನಿಗಳು ಬೆಳೆಸಬೇಕು.ಕಲಾವಿದರನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಕಲಾ ಪೋಷಕರಲ್ಲಿ ಇದೆ ಎಂದು ಹೇಳಿದರು.

ರಾಯಚೂರಿನ ಕನ್ನಡ ಜಾನಪದ ಪರಿಷತ್ತಿನ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಕಾರ್ಯಕ್ರಮ ಕುರಿತು ಮಾತನಾಡುತ್ತಾ ವಿಶೇಷವಾಗಿ ನಮ್ಮ ರಾಯಚೂರು ನಗರದಲ್ಲಿ ರವಿವಾರ ಸಾಯಂಕಾಲ 6:00ಗೆ ಖ್ಯಾತ ನಾಟಕದ ನೃತ್ಯಗಾರರು ಜ್ಯೋತಿ ಬಳ್ಳಾರಿಯವರ ಹೌದಲೇ ರಂಗಿ ಉದಲೇನೆ ಪುಂಗಿ ನಾಟಕವನ್ನು ಪ್ರದರ್ಶನ ಮಾಡಲಿದ್ದಾರೆ. ಜ್ಯೋತಿ ಬಳ್ಳಾರಿಯವರು ಖ್ಯಾತ ರಂಗಭೂಮಿಯ ಕಲಾವಿದರು ಖ್ಯಾತ ನೃತ್ಯಗಾರರು ಹೌದು. ಒಂದು ಸಮಯದಲ್ಲಿ ಯಾವುದೇ ನಾಟಕದಲ್ಲಿ ಜ್ಯೋತಿ ಬಳ್ಳಾರಿ ಇದ್ದಾರೆ ನೃತ್ಯ ಮಾಡುತ್ತಾರೆ ಎಂದು ಹೇಳಿದರೆ ಗೊತ್ತಾದರೆ ಸಾಕು ಸುತ್ತಮುತ್ತಲಿನ ಗ್ರಾಮದವರು ಅವರನ್ನು ಅವರ ಕಲೆ ನೋಡಲು ಬರುತಿದ್ದರು ಇಂಥ ಕಲಾವಿದರು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ರಂಗಭೂಮಿಯ ಮತ್ತು ಕಲಾಪೋಷಕರ ಕರ್ತವವಾಗಿದೆ ಜೊತೆಗೆ ಖ್ಯಾತ ಕಿರುತೆರೆಯ ಮತ್ತು ಚಲನಚಿತ್ರ ಕಲಾವಿದರು ನಟರಾದ ಸಂಜು ಬಸಯ್ಯ. ಪಲ್ಲವಿ ಹಾಗೂ ಮಂಜು ಗುಳೇದಗುಡ್ಡವರು ಭಾಗವಹಿಸಲಿದ್ದು ಈ ಒಂದು ಫುಲ್ ಕಾಮಿಡಿಯ ಹಾಸ್ಯ ಭರಿತವಾದ ನಾಟಕ ಮತ್ತು ಕಾರ್ಯಕ್ರಮವನ್ನು ಪ್ರತಿಯೊಬ್ಬ ರಾಯಚೂರಿನ ನಾಗರಿಕರು ಕಲಾಭಿಮಾನಿಗಳು ಕಲಾಪ್ರೋಕ್ಷಕರು ಬಂದು ನೋಡಿ. ಅವರಿಗೆ ಕಾರ್ಯಕ್ರಮ ಆಯೋಜಿಕರಿಗೆ ತನು ಮನ ಧನದಿಂದ ಸಹಾಯ ಮಾಡಿ ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಖ್ಯಾತ ನೃತ್ಯ ಗಾರತಿ ಜ್ಯೋತಿ ಬಳ್ಳಾರಿ .ಸಂಚಾಲಕರಾದ ಸಂತೋಷ್ ಬಳ್ಳಾರಿ. ಖ್ಯಾತ ಸಂಗೀತಗಾರದ ರಾಘವೇಂದ್ರ ಆಶಾಪುರ್ .ವೀರೇಂದ್ರ ಕುರುಡಿ ಸುಧಾಕರ್ ರವಿ ಕುಮಾರ್ ಸೇರಿದಂತೆ ಇನ್ನಿತರ ರು.ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು

**ಮೊದಲನೇ ಪುಟದಿಂದ**

# ಪ್ರಮಾಣ ವಚನಕ್ಕೆ ಡಿಕೆಶಿ ಭಾರೀ ಸಿದ್ಧತೆ

ಡಿ.ಕೆ.ಶಿವಕುಮಾರ್ ತಮ ಮನೆಗೆ ಮರಳುತ್ತಿದ್ದಂತೆ ಪ್ರಮಾಣವಚನ ಸ್ವಿಕಾರಕ್ಕೆ ಭಾರೀ ತಯಾರಿ ಆರಂಭಿಸಿದರು.ಮೊನ್ನೆ ದೆಹಲಿಗೆ ತೆರಳುವ ಮುನ್ನ ಬೆಂಗಳೂರಿನಲ್ಲಿರುವ ಅಜ್ಜಯ್ಯನ ಪೀಠದ ದರ್ಶನ ಪಡೆದಿದ್ದರು. ಇಂದು ಅಧಿಕಾರ ಖಚಿತವಾಗುತ್ತಿದ್ದಂತೆ ತುಮಕೂರು ಜಿಲ್ಲೆಯ ನೊಣವಿನಕೆರೆಯಲ್ಲಿರುವ ಅಜ್ಜಯ್ಯನ ಮೂಲ ಪೀಠಕ್ಕೆ ಕುಟುಂಬ ಸಮೇತರಾಗಿ ತೆರಳುವ ಕಾರ್ಯಕ್ರಮ ನಿಗದಿಯಾಗಿತ್ತು. ಡಿ.ಕೆ.ಶಿವಕುಮಾರ್ ಅವರ ಪತ್ನಿ, ಪುತ್ರಿ ಜೊತೆಯಲ್ಲಿ ತೆರಳಲಿದ್ದಾರೆ ಎನ್ನಲಾಗಿತ್ತು.

ಡಿ.ಕೆ.ಶಿವಕುಮಾರ್ ಅಪಾರ ದೈವ ಭಕ್ತರಾಗಿದ್ದು, ಪ್ರತಿಯೊಂದು ಹಂತದಲ್ಲೂ ಶುಭಗಳಿಗೆ, ಶುಭ ಮುಹೂರ್ತ ಆಧರಿಸಿಯೇ ಮುಂದಿನ ಹೆಜ್ಜೆ ಇಡುತ್ತಾರೆ. ಮುಖ್ಯಮಂತ್ರಿಯಾಗುವ ಮಹತ್ವದ ಗಳಿಗೆಯಲ್ಲಿ ಶುಭಮುಹೂರ್ತಕ್ಕಾಗಿ ತಮ ಕುಟುಂಬದ ಜ್ಯೊತಿಷಿ ದ್ವಾರಕನಾಥ್ ಅವರನ್ನು ಸಂಪರ್ಕಿಸಿದ್ದಾರೆ ಎನ್ನಲಾಗಿದೆ.ಅಜ್ಜಯ್ಯನ ಪೀಠಕ್ಕೆ ಹೋಗಿ ಆಶೀರ್ವಚನ ಪಡೆದ ಬಳಿಕ ಮುಹೂರ್ತ ನಿಗದಿಪಡಿಸಲಿದ್ದಾರೆ ಎಂದು ತಿಳಿದು ಬಂದಿದೆ.ಬಹುತೇಕ ನಾಳೆ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಶನಿವಾರ ಅಥವಾ ಭಾನುವಾರ ನೂತನ ಮುಖ್ಯಮಂತ್ರಿಯ ಪ್ರಮಾಣ ವಚನ ಸ್ವಿಕಾರ ಸಮಾರಂಭ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

**ಬದಲಾದ ಶಕ್ತಿ ಕೇಂದ್ರ:** ಸಿದ್ದರಾಮಯ್ಯ ಅವರು ರಾಜ್ಯ ಕಾಂಗ್ರೆಸ್‌ನಲ್ಲಿ ಕಳೆದ 15 ವರ್ಷಗಳಿಂದಲೂ ಅನಭಿಷಿಕ್ತ ನಾಯಕತ್ವ ಹೊಂದಿದ್ದರು. ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾದ ಬಳಿಕ ಶಕ್ತಿ ಕೇಂದ್ರದಲ್ಲಿ ವಿಭಜನೆಯಾಗಿತ್ತು. ಆದರೂ ಸಿದ್ದರಾಮಯ್ಯ ಅವರದು ಒಂದು ಕೈಮೇಲೆ ಎಂಬಂತ ಪರಿಸ್ಥಿತಿ ಇತ್ತು.

ಇಂದು ಡಿ.ಕೆ.ಶಿವಕುಮಾರ್ ಮುಂದಿನ ಮುಖ್ಯಮಂತ್ರಿ ಎಂದು ಘೋಷಿಸಿದಂತೆ ಇಲ್ಲಿವರೆಗೂ ಸಿದ್ದರಾಮಯ್ಯ ಅವರ ಸುತ್ತಾಮುತ್ತ ಠಳಾಯಿಸುತ್ತಿದ್ದ ಶಾಸಕರು, ನಾಯಕರು ಏಕಾಏಕಿ ಡಿ.ಕೆ.ಶಿವಕುಮಾರ್ ಅವರ ಮನೆಯತ್ತ ವಾಲಿದರು.ಇದ್ದಕ್ಕಿದ್ದಂತೆ ಸದಾಶಿವನಗರದಲ್ಲಿರುವ ಮನೆ ಬಳಿ ಜನಜಂಗುಳಿಯ ಜಾತ್ರೆಯಾಗಿ ಪರಿವರ್ತನೆಯಾಗಿತ್ತು. ಕಾರ್ಯಕರ್ತರು, ಮುಖಂಡರು, ಸಚಿವ ಸ್ಥಾನ ಸೇರಿದಂತೆ ವಿವಿಧ ಹುದ್ದೆಗಳ ಆಕಾಂಕ್ಷಿಗಳ ದಂಡೇ ನೆರೆದಿತ್ತು. ಡಿ.ಕೆ.ಶಿವಕುಮಾರ್ ಅವರಿಗೆ ಅಭಿಮಾನದ ಅಭಿನಂದನೆಗಳ ಮಹಾಪೂರವೇ ಕಂಡು ಬಂದಿತ್ತು.

# ಅರಕೇರಾ: ಬಕ್ರೀದ್ ಹಬ್ಬ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ



ಧೈರ್ಯದ ದಾರಿ

**ಅರಕೇರಾ:** ಪಟ್ಟಣದಲ್ಲಿ ತ್ಯಾಗ,ಬಲಿದಾನ ಧರ್ಮನಿಷ್ಟೆಯ ಸಂಕೇಶವಾಗಿರುವ ಬಕ್ರೀದ್ ಹಬ್ಬವನ್ನು ಮುಸ್ಲಿಂ ಸಮೂದಾಯದವರು ಶ್ರದ್ದಾ ಭಕ್ತಿಯಿಂದ ಗುರುವಾರ ಆಚರಿಸಿದರು.

ಮುಂಜಾನೆಯಿಂದಲ್ಲೇ ಹೊಸ ಬಟ್ಟೆಗಳನ್ನು ತೊಟ್ಟು ಮಕ್ಕಳು ,ಹಿರಿಯರು ಜಾಮೀಯ ಮಸೀದಿ ಸೇರಿದಂತೆ ಪಟ್ಟಣದಲ್ಲಿ 3 ಮಸೀದಿಯಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು ನಂತರ ಸಾವಿರಾರು ಮುಸ್ಲಿಂ ಭಾಂಧವರು ಪಟ್ಟಣದ ಹೊರವಲಯದಲ್ಲಿನ ಈದ್ಗಾ ಮೈದಾನದಲ್ಲಿ ಧರ್ಮಗುರು ಅಲೀಂಖಾಜಿ,ಹುಸೇನಬಾಷ ಅವರು ತತ್ವಗಳನ್ನು ಭೋದಿಸಿದರು.ಅಲ್ಲಾಹು ಅಕ್ಬರ್ ಎಂಬ ನಾಮಸ್ಮರಣೆ ಎಲ್ಲೇಡೆ ಅನುರಣಿಸಿತು.ಅರಕೇರಾ,ಅಗ್ರಹಾರ, ನಾಗೋಲಿ,ಪಿಲಿಗುಂಡ, ಆಲ್ಕೋಡ, ಭೂಮನಗುಂಡ ಗ್ರಾಮಸ್ಥರು ಕೂಡಾ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಪಟ್ಟಣದ ಹಿರಿಯ ಮುಖಂಡರಾದ ಸತ್ಯನಾರಾಯಣನಾಯಕ ಪೋಲಿಸ್ ಪಾಟೀಲ್ ಮಾಜಿ ಜಿಲ್ಲಾ ಪಂಚಾಯತ ಸದಸ್ಯರ ನಿವಾಸದಲ್ಲಿ ಮುಸ್ಲಿಂ ಗುರುಗಳಾದ ಅಲಿಂಖಾಜಿಯವರಿಗೆ ಹುಸೇನಬಾಷ ಹಾಪಿಸಾಬ ಇಬ್ಬರನ್ನು ಸನ್ಮಾನಿಸಿ ಗೌರವಿಸಿದರು. ವಿಳ್ಯೆಬಾಬತ್ತು ನೀಡಿ ಸತ್ಕಾರಿಸಿದರು.ಜಾಮೀಯಾ ಮಸೀದಿ ಅಧ್ಯಕ್ಷ ಜಲೀಲಾಸಾಬ ಸೇರಿದಂತೆ ಸಮಾಜದ ಬಾಂಧವರು ಉಪಸ್ಥಿತರಿದ್ದರು.

ನಂತರ ಬಡವರ್ಗದವರಿಗೆ ಬಟ್ಟೆ,ಆಹಾರ,ಸಾಮಾಗ್ರಿ,ಹಣವನ್ನು ದಾನವಾಗಿ ನೀಡುವ ಮೂಲಕ ಹಬ್ಬವನ್ನು ಆಚರಣೆ ಮಾಡಿದರು. ನಂತರ ಮುಸ್ಲಿಂ ಸಮೂದಾಯದವರು ಪಟ್ಟಣದಲ್ಲಿನ ಮಾಜಿ ಸಚಿವರಾದ ಕೆ,ಶಿವನಗೌಡನಾಯಕ,ಆರ್ ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಎ.ರಾಜಶೇಖರನಾಯಕ,ಕೆ,ಅನಂತರಾಜನಾಯಕ, ಮಾಜಿ ಗ್ರಾಮ ಪಂಚಾಯತ ಅಧ್ಯಕ್ಷರಾದ ತಿಮ್ಮಪ್ಪನಾಯಕ ಪೋಲಿಸ್ ಪಾಟೀಲ್.ಕಲ್ಪವೃಕ್ಷ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ಬಸವರಾಜ ಪೂಜಾರಿ ಸೇರಿದಂತೆ ಪಟ್ಟಣದಲ್ಲಿ ಪ್ರಮುಖ ಮುಖಂಡರುಗಳ ಮನೆಗೆ ತೆರೆಳಿ ಪಟ್ಟಣದಲ್ಲಿ ಶುಭಾಶಯ ವಿನಿಮಯ ಮಾಡಿಕೊಂಡರು. ಈದ್ಗಾ ಮೈದಾನದಲ್ಲಿ ದೇವದುರ್ಗ ಪೋಲಿಸ್ ಅಧಿಕಾರಿಗಳು ಬಂದೋ ಬಸ್ತ ಏರ್ಪಡಿಸಿದರು.ಹಬ್ಬದ ಪ್ರಯುಕ್ತ ಬಂಧು ಬಾಂಧವರು,ಮಿತ್ರರನ್ನು ಮನೆಗೆ ಕರೆದುಕೊಂಡು ಹಬ್ಬದ ಊಟ ಸವಿದರು.

# ಸಚಿವ ಸಂಪುಟದ ಪುನಾರಚನೆಯಲ್ಲಿ ಶಾಸಕ ಬಸನಗೌಡ ದದ್ದಲ್‌ಗೆ ಸಚಿವ ಸ್ಥಾನ ನೀಡುವಂತೆ ನಿಹಾರಿಕಾ ನಾಯಕ ಒತ್ತಾಯ

ಧೈರ್ಯದ ದಾರಿ



**ರಾಯಚೂರು :** ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರು, ಶ್ರೀ ಮಹರ್ಷಿ ವಾಲ್ಮೀಕಿ ನಿಗಮ ಅಧ್ಯಕ್ಷರಾಗಿರುವ ಬಸನಗೌಡ ದದ್ದಲ್ ಅವರಿಗೆ ಕಾಂಗ್ರೆಸ್ ವರಿಷ್ಠರು, ಹಾಗೂ ರಾಜ್ಯದ ಮುಖ್ಯಮಂತ್ರಿಗಳು ಅವರು ರಾಜ್ಯದ ಅಭಿವೃದ್ಧಿಯ ಹಿತದೃಷ್ಟಿಯಿಂದ ಶಾಸಕ ಬಸನಗೌಡ ದದ್ದಲ್ ಅವರಿಗೆ ನೂತನ ರಾಜ್ಯ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕು ಎಂದು ನಿಹಾರಿಕಾ ನಾಯಕ ಅವರು ಸರ್ಕಾರಕ್ಕೆ ಒತ್ತಾಯಿಸಿದರು.

ಶಾಸಕ ಬಸನಗೌಡ ದದ್ದಲ್ ಅವರು ಕೇವಲ ಹೆಸರಿಗಷ್ಟೇ ಶಾಸಕರಾಗದೇ, ಕ್ಷೇತ್ರದ ಗ್ರಾಮೀಣ ಭಾಗದ ಪ್ರತಿಯೊಂದು ಹಳ್ಳಿಗೂ ಭೇಟಿ ನೀಡಿ ಜನರ ಕಷ್ಟ–ಸುಖಗಳಿಗೆ ಸ್ಪಂದಿಸುತ್ತಿದ್ದಾರೆ. ಹಗಲಿರುಳು 24*7 ಜನರ ಸೇವೆಗಾಗಿ ಶ್ರಮಿಸುತ್ತಿರುವ ಅವರು, ಎಂ.ಎಲ್.ಎ ಎಂದರೆ ಕೇವಲ ವಿಧಾನಸೌಧಕ್ಕೆ ಹೋಗಿ ಬರುವುದಷ್ಟೇ ಅಲ್ಲ ಎಂಬುದನ್ನು ತಮ್ಮ ಜನಪರ ಕೆಲಸಗಳ ಮೂಲಕ ಸಾಬೀತುಪಡಿಸಿದ್ದಾರೆ. ಗ್ರಾಮೀಣ ಕ್ಷೇತ್ರದ ನೀರಾವರಿ, ಶಿಕ್ಷಣ, ಆರೋಗ್ಯ ಸೇರಿದಂತೆ ನಾನಾ ಕ್ಷೇತ್ರಗಳಲ್ಲಿ ಅವರು ಮಾಡಿರುವ ಅಭಿವೃದ್ಧಿ ಕಾರ್ಯಗಳು ಶ್ಲಾಘನೀಯ" ಎಂದಿದ್ದಾರೆ. ಗ್ರಾಮಾಂತರ ಕ್ಷೇತ್ರದ ರೈತರ ಸಮಸ್ಯೆಗಳಾದ ನೀರಾವರಿ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಸೇರಿ ಮೂಲಭೂತ ಸೌಕರ್ಯಗಳು ಒದಗಿಸುವಲ್ಲಿ ಸಿಎಂ ಸಿದ್ದರಾಮಯ್ಯ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಮೇಲೆ ಒತ್ತಡ ಹಾಕಿ ತಂದು ಅನುಷ್ಠಾನಗೊಳಿಸಲು ಶ್ರಮಿಸುತ್ತಿದ್ದಾರೆ. ರಾಜ್ಯದ ವಾಲ್ಮೀಕಿ ನಾಯಕ ಸಮುದಾಯದ ಪ್ರಬಲ ಪ್ರತಿನಿಧಿಯಾಗಿ ಪಕ್ಷ ಹಾಗೂ ಸರ್ಕಾರ ನೀಡಿದ ಜವಾಬ್ದಾರಿಯನ್ನು ನಿಭಾಯಿಸುವುದರಲ್ಲಿ ಸಾಮರ್ಥ್ಯ ಹೊಂದಿದ್ದು ಅನೇಕ ಸಮಾವೇಶ ಕಾರ್ಯಕ್ರಮಗಳ ಯಶಸ್ವಿಗೊಳಸಿ ಪಕ್ಷಕ್ಕೆ ಬದ್ಧತೆ ತೋರಿಸಿದ್ದಾರೆ ಕರ್ನಾಟಕದಲ್ಲಿ ವಾಲ್ಮೀಕಿ ನಾಯಕ ಸಮಾಜದ ಹಿತಕ್ಕಾಗಿ ಶ್ರೀ ಮಹರ್ಷಿ ವಾಲ್ಮೀಕಿ ನಿಗಮ ಮೂಲಕ ಯೋಜನೆಗಳ ತಲುಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದಾರೆ. ಅಲ್ಲದೆ ರಾಯಚೂರು ಗ್ರಾಮೀಣ ಕ್ಷೇತ್ರವನ್ನು ಪ್ರತಿನಿಧಿಸಿ ಜನರು ಪ್ರೀತಿಗಳಿಸಿದ್ದರಿಂದ ಎರಡನೇ ಬಾರಿಗೆ ಇತಿಹಾಸ ಸೃಷ್ಟಿಸಿ ಶಾಸಕರಾಗಿ ಪುನರಾಯ್ಕೆ ಆಗಿದ್ದಾರೆ. ಹೀಗಾಗಿ ಹೈಕಮಾಂಡ್ ಅವರಿಗೆ ಶಾಸಕ ಬಸನಗೌಡ ದದ್ದಲ್ ಅವರು ಬದ್ಧತೆ ಪರಿಗಣಿಸಿ ಪರಿಶಿಷ್ಟ ಪಂಗಡದ (ಎಸ್ ಟಿ) ಸಮುದಾಯದಲ್ಲಿ ಪ್ರಬಲ ನಾಯಕರಾಗಿರುವ ಇವರಿಗೆ ಸಚಿವ ಸಂಪುಟದಲ್ಲಿ ಅವಕಾಶ ನೀಡಿದರೆ ಸಮುದಾಯಕ್ಕೆ ನ್ಯಾಯ ಒದಗಿಸಿದಂತಾಗುತ್ತದೆ ಎಂಬುದು ಪ್ರಮುಖ ವಾದವಾಗಿದೆ.

ಶಾಸಕರ ಸೇವೆಯಲ್ಲಿ ಸಹಭಾಗಿಯಾದ ಧರ್ಮಪತ್ನಿ ಸರಸ್ವತಿ ಬಸನಗೌಡ ದದ್ದಲ್

ಶಾಸಕ ದದ್ದಲ್ ಅವರ ಸಾರ್ವಜನಿಕ ಸೇವೆಯ ಜೊತೆಗೆ, ಅವರ ಧರ್ಮಪತ್ನಿಯಾದ ಶ್ರೀಮತಿ ಸರಸ್ವತಿ ಬಸನಗೌಡ ದದ್ದಲ್ ಅವರ ಕೊಡುಗೆಯೂ ಅಪಾರವಾಗಿದೆ.ಅಧಿಕಾರದಲ್ಲಿ ಯಾವುದೇ ಪ್ರಚಾರ ಬಯಸದೇ ಎಲೆಮರೆ ಕಾಯಿಯಂತೆ ಧರ್ಮಕಾರ್ಯ ಹಾಗೂ ಸಮಾಜ ಸೇವೆಯಲ್ಲಿ ಅವರು ತೊಡಗಿಸಿಕೊಂಡಿದ್ದಾರೆ. ಜನರ ಸಮಸ್ಯೆಗಳಿಗೆ ನಿರಂತರವಾಗಿ ಪರಿಹಾರ ಹುಡುಕುತ್ತಾ, ನೂರಾರು ಬಡ ಕುಟುಂಬಗಳಿಗೆ ಆಸರೆಯಾಗಿದ್ದಾರೆ. ಶಾಸಕರ ಹೆಜ್ಜೆಗೆ ಹೆಜ್ಜೆಯಿಟ್ಟು, ಗ್ರಾಮೀಣ ಕ್ಷೇತ್ರದ ಮಹಿಳಾ ಶಕ್ತಿಯ ಪ್ರತೀಕವಾಗಿ ನಿಂತಿರುವ ಇಂತಹ ಆದರ್ಶ ದಂಪತಿಗಳ ಇವರು ಅದರಿಂದ ಹಾಗೂ ನೂತನ ರಾಜ್ಯಸಚಿವ ಸಂಪುಟದಲ್ಲಿ ಬಸವನಗೌಡ ದದ್ದಲಗೆ ಉನ್ನತ ಸಚಿವ ಸ್ಥಾನ ನೀಡಬೇಕು ಎಂದು ನಿಹಾರಿಕ ನಾಯಕ ಅವರು ಕಾಂಗ್ರೆಸ್ ರಾಜ್ಯ/ ಹೈಕಮಾಂಡ್ ನಾಯಕರಿಗೆ ಒತ್ತಾಯಿಸಿದ್ದಾರೆ.

# ಪ್ರತಿಯೊಬ್ಬ ವಿದ್ಯಾರ್ಥಿನಿಯರು ಸಂಕೋಚಿತ ಮನೋಭಾವನೆಯಿಂದ ಹೊರಬರುವ ಪ್ರವೃತ್ತಿಯನ್ನು ಬೆಳೆಸಿಕೊಳ್ಳಬೇಕು : ಡಾ. ಬಸವರಾಜ್ ಕರಡಿಗುಡ್ಡ



ಧೈರ್ಯದ ದಾರಿ

**ಮಾನ್ವಿ** –– ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಯರ ವಸತಿ ನಿಲಯದಲ್ಲಿ ಬಿ.ಎ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬಿಳ್ಕೊಡುಗೆ ಕಾರ್ಯಕ್ರಮ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಈ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಭಾಗವಹಿಸಿ ಮಾತನಾಡಿದ ಡಾ.ಬಸವರಾಜ್ ಕರಡಿಗುಡ್ಡರವರು ವಿದ್ಯಾರ್ಥಿನಿಯರು ಸಮಾಜದ ಅಂಕುಡೊಂಕುಗಳಿಗೆ, ಚುಚ್ಚು ಮಾತುಗಳಿಗೆ ಕಿವಿ ಕೊಡದೆ ತಮ್ಮ ನಿರ್ದಿಷ್ಟ ಗುರಿಗಳತ್ತ ಮುನ್ನುಗ್ಗಬೇಕು ಅಲ್ಲದೆ ಪ್ರತಿಯೊಬ್ಬ ವಿದ್ಯಾರ್ಥಿನಿಯರು ಸಂಕೋಚಿತ ಮನೋಭಾವನೆಯಿಂದ ಹೊರಬರುವ ಪ್ರವೃತ್ತಿಯನ್ನು ಬೆಳೆಸಿಕೊಂಡಾಗ ಮಾತ್ರ ಸಮಾಜದ ಉನ್ನತ ಹುದ್ದೆಗಳನ್ನು ಪಡೆಯಲು ಸಾಧ್ಯ ಅದಕ್ಕೆ ಸತತ ಪ್ರಯತ್ನ ನಿರಂತರ ಅಭ್ಯಾಸದ ಕಡೆ ಗಮನಹರಿಸಬೇಕೆಂದು ತಿಳಿಸಿದರು. ಅಲ್ಲದೆ ಸರಕಾರದ ಪ್ರತಿಯೊಂದು ಯೋಜನೆಗಳ ಸದುಪಯೋಗವನ್ನು ಪಡೆದುಕೊಂಡು ವಿದ್ಯಾರ್ಥಿಗಳು ಸರಕಾರಿ ನೌಕರಿಯನ್ನು ಪಡೆಯುವ ನಿಟ್ಟಿನಲ್ಲಿ ಪ್ರಯತ್ನಿಸಿದಾಗ ಮಾತ್ರ ತಮ್ಮ ತಂದೆ ತಾಯಿಯ ಪರಿಶ್ರಮಕ್ಕೆ ತಕ್ಕ ಪ್ರತಿಫಲ ನೀಡಿದಂತಾಗುತ್ತದೆ ಆ ನಿಟ್ಟಿನಲ್ಲಿ ವಿದ್ಯಾರ್ಥಿನಿಯರು ವಸತಿ ನಿಲಯದಲ್ಲಿ ತಮಗೆ ನೀಡಲಾಗಿದ ಗ್ರಂಥಾಲಯ, ಕಂಪ್ಯೂಟರ್ ಲ್ಯಾಬಿನ ಸದುಪಯೋಗ ಪಡೆದುಕೊಂಡು ತಮ ಜ್ಞಾನಾರ್ಜನೆಯನ್ನು ಹೆಚ್ಚಿಸಿಕೊಂಡು ಕುಟುಂಬದ ಘನತೆ ಗೌರವವನ್ನು ಉನ್ನತ ಮಟ್ಟದಲ್ಲಿ ತೆಗೆದುಕೊಂಡು ಹೋಗುವ ಪ್ರಯತ್ನ ಮಾಡಬೇಕೆ ವಿನಹ ಯಾವುದೇ ರೀತಿಯ ತಂದೆ–ತಾಯಿಗಳಿಗೆ, ಸಮಾಜಕ್ಕೆ ನೋವು ಉಂಟಾಗುವ ಕೃತ್ಯಗಳನ್ನು ಮಾಡಬಾರದೆಂದು ತಿಳಿಸಿದರು. ಸಮಯ ಯಾವುದಕ್ಕೂ, ಯಾರೊಂದಿಗೂ ನಿಲ್ಲುವುದಿಲ್ಲ ಅದನ್ನು ಸರಿಯಾದ ಸಮಯಕ್ಕೆ ಸರಿಯಾದ ರೀತಿಯಲ್ಲಿ ಬಳಸಿಕೊಂಡಾಗ ಮಾತ್ರ ಬದುಕು ಸಾರ್ಥಕವಾಗುತ್ತದೆ ಎಂದು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಹನುಮೇಶ ನಾಯಕ ಸಾದಾಪುರ ಜಿಲ್ಲಾಧ್ಯಕ್ಷರು ಮಹರ್ಷಿ ವಾಲ್ಮೀಕಿ ಸಂಘ ರಾಯಚೂರು ಇವರು ಮಾತನಾಡಿ ವಿದ್ಯಾರ್ಥಿಗಳು ತಮ್ಮ ತಂದೆ ತಾಯಿಗಳ ಕಷ್ಟ, ಬಡತನಗಳನ್ನು ಅರ್ಥೈಸಿಕೊಂಡು ಓದಿನ ಕಡೆ ಹೆಚ್ಚು ಗಮನ ನೀಡಬೇಕೆ ಹೊರತು ಯಾವುದೇ ವ್ಯಾಮೋಹಕ್ಕೆ ಬಲಿಯಾಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳಬಾರದೆಂದು ತಿಳಿಸಿದರು ಅಲ್ಲದೇ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಮಾಡಿಕೊಂಡು ಸರ್ಕಾರಿ ಹುದ್ದೆಯನ್ನು ಪಡೆಯುವ ನಿಟ್ಟಿನಲ್ಲಿ ಪ್ರಯಾಣಿಸಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿಕೊಂಡಿದ್ದ ನಿಲಯ ಮೇಲ್ವಿಚಾರಕಿಯಾದ ಶ್ರೀಮತಿ ರೂಪ ಶ್ರೀನಿವಾಸ ನಾಯಕ ಇವರು ಮಾತನಾಡಿ ವಿದ್ಯಾರ್ಥಿನಿಯರಲ್ಲಿ, ಅದರಲ್ಲೂ ವಿಶೇಷವಾಗಿ ಮಹಿಳೆಯರಲ್ಲಿ ಒಂದು ವಿಶೇಷವಾದ ಅಗಾಧ ಶಕ್ತಿ ಇರುತ್ತದೆ ಅದನ್ನು ನಾವು ಸರಿಯಾಗಿ ಅರ್ಥೈಸಿಕೊಂಡು ಬಳಸಿಕೊಂಡಾಗ ಮಾತ್ರ ಹೆಣ್ಣು ಎಲ್ಲದರಲ್ಲಿಯೂ ಮುಂದೆ ಬರಲು ಸಾಧ್ಯ. ಹೆಣ್ಣು ಯಾವತ್ತೂ ಅಬಲೆಯಲ್ಲ, ಸಬಲೆಯಾಗಿ ಪ್ರತಿಯೊಂದು ಕ್ಷೇತ್ರದಲ್ಲಿಯೂ ಸಾಧನೆಗ?ಯುತ್ತಿರುವುದು ನಿಮ್ಮೆಲ್ಲರಿಗೂ ಸ್ಪೂರ್ತಿಯಾಗಲಿ, ಮುಂದಿನ ವಿದ್ಯಾಭ್ಯಾಸದ ಜೀವನ ಉಜ್ವಲವಾಗಿರಲಿ ಎಂದು ಶುಭ ಹಾರೈಸಿದರು ಈ ಕಾರ್ಯಕ್ರಮದಲ್ಲಿ ಮತ್ತೋರ್ವ ಅತಿಥಿಗಳಾಗಿ ಭಾಗವಹಿಸಿದ ಶ್ರೀ ಶ್ರೀನಿವಾಸ್ ನಾಯಕ್ ಕೋನಪುರ ಪೇಟೆ ಇವರು ವಿದ್ಯಾರ್ಥಿಗಳಿಗೆ ಶುಭ ಕೋರಿದರು ಕಾರ್ಯಕ್ರಮದಲ್ಲಿ ವಸತಿ ನಿಲಯದ ಸಿಬ್ಬಂದಿಗಳಾದ ಶ್ರೀಮತಿ ಶಾಹಿನ್ ಬೇಗಂ, ಶ್ರೀಮತಿ ಸೋನಿಯಾ , ಅಡುಗೆ ಸಿಬ್ಬಂದಿಗಳಾದ ಶ್ರೀಮತಿ ಸಂಗೀತ, ಎಲ್ಲಮ್ಮ ಎಲ್ಲ ವಿದ್ಯಾರ್ಥಿನಿಯರು ಭಾಗವಹಿಸಿದ್ದರು ಕಾರ್ಯಕ್ರಮದಲ್ಲಿ ಕಾರ್ಯಕ್ರಮದ ನಿರೂಪಣೆಯನ್ನು ಕುಮಾರಿ ರೇಣುಕಾ ಗಲಗ ಇವರು ನೆರವೇರಿಸಿಕೊಟ್ಟರು ಪ್ರಾರ್ಥನೆ ಗೀತೆಯನ್ನು ಕುಮಾರಿ ಈರಾಂಬಿಕಾ, ವಂದನಾರ್ಪಣೆಯನ್ನು ಕುಮಾರಿ ಕವಿತಾ ನೆರವೇರಿಸಿದರು.

# ಜೂ,5ರಿಂದ ಅಂತಾರಾಷ್ಟ್ರೀಯ ಯೋಗ ದಿನಾಚಾರಣೆಯ ಅಂಗವಾಗಿ ಉಚಿತ ಯೋಗ ತರಬೇತಿ ಶಿಬಿರ



**ಮಾನ್ವಿ:** ಪಟ್ಟಣದ ಕಲ್ಮಠ ಧ್ಯಾನಮಂದಿರದಲ್ಲಿ ಯೋಗಸನ್ನಿಧಿ ಜ್ಞಾನ ವಿದ್ಯಾಪೀಠ ಟ್ರಸ್ಟ್,ಹಾಗೂ ಎಸ್.ವಿ.ವಿ.ಕೆ.(ರಿ) ಕೆ.ಪಿ.ಎಸ್.ವಿ.ಎಸ್,ವಿ.ಎಸ್. ಆಯುರ್ವೇದ ಕಾಲೇಜು ಮತ್ತು ಆಸ್ಪತ್ರೆ ಹಾಗೂ ಲಯನ್ಸ್ ಕ್ಲಬ್ ಮಾನ್ವಿ ಸಂಯುಕ್ತಾಶ್ರಯದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚಾರಣೆಯ ಅಂಗವಾಗಿ ಜೂ.5ರಿಂದ 21 ರವರೆಗೆ ಉಚಿತ ಯೋಗ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದು. ಬೆಳಿಗ್ಗೆ 5–30 ರಿಂದ 6.30ರವರೆಗೆ ವೈದ್ಯ ವಿದ್ಯಾರ್ಥಿಗಳಿಗೆ ಹಾಗೂ ಪುರುಷರಿಗೆ ಷಟ್ ಕ್ರಿಯೆಗಳ ಯೋಗ ಅಭ್ಯಾಸ ಹಾಗೂ ಸಂಜೆ 6.30 ರಿಂದ 7.00ರವರೆಗೆ ಮಹಿಳೆಯರಿಗಾಗಿ ಕ್ಲಿನಿಕಲ್ ಯೋಗ ಥೆರಪಿ ತರಬೇತಿಯಲ್ಲಿ ಮಹಿಳೆಯರಲ್ಲಿ ಕಾಣಿಸಿಕೊಳ್ಳುವ ರಕ್ತಾಚಾಪ, ಬೊಜ್ಜು, ಬೆನ್ನು,ಕತ್ತು,ಮೊಣಕಾಲು ನೋವು,ಮಾನಸಿಕ ಒತ್ತಡ, ಪಿ.ಸಿ.ಒ.ಡಿ, ಮುಟ್ಟಿನ ಸಮಸ್ಯೆಗಳಿಗೆ ಸರಳ ಯೋಗ ಆಸನಗಳನ್ನು ಹೇಳಿಕೊಡಲಾಗುತ್ತದೆ. ಆಸಕ್ತರು ನೋಂದಾಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆ.ಪಿ.ಎಸ್.ವಿ.ಎಸ್,ವಿ.ಎಸ್. ಆಯುರ್ವೇದ ಕಾಲೇಜಿನ ಪ್ರಾಚಾರ್ಯರು ದೂ.ಸಂಖ್ಯೆ 9900682020 ಮ ಲಯನ್ಸ್ ಕ್ಲಬ್ ಮಾನ್ವಿ ಅಧ್ಯಕ್ಷರಾದ ನಾಗರಾಜ್ ದೂ.ಸಂಖ್ಯೆ 9945246999, ದೂ. 9972345711 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಯೋಗಗುರು ಅನ್ನದಾನಯ್ಯಸ್ವಾಮಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಕೆ.ಎಚ್. ಮುನಿಯಪ್ಪರಿಗೆ ಮುಖ್ಯಮಂತ್ರಿ ಅಥವಾ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು : ಹೆಚ್, ಬಿ ಮುರಾರಿ




**ಲಿಂಗಸುಗೂರು :** ರಾಜ್ಯ ರಾಜಕೀಯದಲ್ಲಿ ಇತ್ತೀಚೆಗೆ ನಡೆದಿರುವ ಬದಲಾವಣೆಗಳ ಹಿನ್ನೆಲೆ, ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಅನುಭವೀ ರಾಜಕಾರಣಿ ಕೆ,ಎಚ್ ಮುನೀಯಪ್ಪ ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ದಲಿತ ಮುಖಂಡ ಎಚ್, ಬಿ ಮುರಾರಿ ಒತ್ತಾಯಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷವು ಸದಾ ತಳ ಸಮುದಾಯದ ಪರವಾಗಿ ಕೆಲಸ ಮಾಡುತ್ತಿರುವುದಾಗಿ ಹೇಳಿಕೊಳ್ಳುತ್ತದೆ. ಪರಿಶಿಷ್ಟ ಜಾತಿಗೆ ಮೀಸಲಾದ ರಾಜಕೀಯ ಸ್ಥಾನಮಾನ ಹಾಗೂ ಸಾಮಾಜಿಕ ನ್ಯಾಯವನ್ನು ಕಾಪಾಡುವ ಉದ್ದೇಶದಿಂದ ಹಿರಿಯ ನಾಯಕ ಕೆ.ಎಚ್. ಮುನಿಯಪ್ಪ ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.

ರಾಜಕೀಯದಲ್ಲಿ ಅಪಾರ ಅನುಭವ ಹೊಂದಿರುವ ಮುನಿಯಪ್ಪ ಅವರು ಹಲವು ಹುದ್ದೆಗಳನ್ನು ಯಶಸ್ವಿಯಾಗಿ ನಿರ್ವಹಿಸಿದ್ದು, ಪಕ್ಷ ಸಂಘಟನೆ ಹಾಗೂ ಆಡಳಿತ ಕ್ಷೇತ್ರದಲ್ಲಿ ವಿಶೇಷ ಕೊಡುಗೆ ನೀಡಿದ್ದಾರೆ.

ಇಂತಹ ನಾಯಕರಿಗೆ ರಾಜ್ಯದ ಉನ್ನತ ಹುದ್ದೆ ನೀಡುವುದರಿಂದ ತಳ ಸಮುದಾಯದ ಜನರಿಗೆ ಮತ್ತಷ್ಟು ಧೈರ್ಯ ಮತ್ತು ವಿಶ್ವಾಸ ಸಿಗಲಿದೆ ಎಂದು ಹೇಳಿದರು.

ಒಂದು ವೇಳೆ ಮುಖ್ಯಮಂತ್ರಿ ಸ್ಥಾನ ನೀಡಲು ಸಾಧ್ಯವಾಗದಿದ್ದರೆ, ಕನಿಷ್ಠ ಉಪಮುಖ್ಯಮಂತ್ರಿ ಸ್ಥಾನವಾದರೂ ನೀಡಿ ಸಮಾಜಕ್ಕೆ ನ್ಯಾಯ ಒದಗಿಸಬೇಕು ಎಂದು ಕಾಂಗ್ರೆಸ್ ಹೈಕಮಾಂಡ್ ಹಾಗೂ ರಾಜ್ಯ ನಾಯಕರಿಗೆ ಮನವಿ ಮಾಡಿದರು.

ಕಾಂಗ್ರೆಸ್ ಪಕ್ಷ ತಳ ಸಮುದಾಯದ ಪರ ಕೆಲಸ ಮಾಡುತ್ತದೆ ಎಂದು ಹೇಳಿಕೊಳ್ಳುತ್ತದೆ. ಆದರೆ ಅದು ಕೇವಲ ಮಾತಿನಲ್ಲೇ ಉಳಿಯಬಾರದು. ಪರಿಶಿಷ್ಟ ಜಾತಿಯ ಸಮುದಾಯಕ್ಕೆ ರಾಜಕೀಯದಲ್ಲಿ ಸಮರ್ಪಕ ಸ್ಥಾನಮಾನ ನೀಡಿ, ಸಾಮಾಜಿಕ ನ್ಯಾಯದ ಬದ್ಧತೆಯನ್ನು ತೋರಿಸಬೇಕು ಎಂದು ಹನುಮಂತಪ್ಪ ಕುಣೆಕೆಲ್ಲೂರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಹನುಮಂತ ಜಾಲಿಬೆಂಚಿ, ನಾಗರಾಜ ಆಸ್ಕಿಹಾಳ, ಆಂಜನೇಯ ಭಂಡಾರಿ, ಮೌನೇಶ ಐದನಾಳ ಸೇರಿದಂತೆ ಇದ್ದರು.

# ಸಿದ್ದರಾಮಯ್ಯ ಸಿಎಂ ಆಗಿ ಮುಂದುವರೆಯಬೇಕು: ಅಹಿಂದ ಮುಖಂಡರ ಆಗ್ರಹ



**ಬಳ್ಳಾರಿ, ಮೇ.28:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇನ್ನೂ ಎರಡು ವರ್ಷಗಳ ಕಾಲ ಹುದ್ದೆಯಲ್ಲಿ ಮುಂದುವರಿಯಬೇಕು ಎಂದು ಕುರುಬ ಸಮಾಜದ ಹಾಗೂ ಅಹಿಂದ ಸಂಘಟನೆ ಮುಖಂಡರು ಆಗ್ರಹಿಸಿದ್ದಾರೆ.

ನಗರದ ಜಿಲ್ಲಾ ಕುರುಬ ಸಂಘದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಕುರುಬ ಸಂಘದ ಅಧ್ಯಕ್ಷ ಡಾ.ಪಿ.ಎಲ್.ಗಾದಿಲಿಂಗನಗೌಡ, ಪ್ರಧಾನ ಕಾರ್ಯದರ್ಶಿ ಅಲ್ಲಿಪುರದ ಕೆ.ಮೋಹನ್ ಮೊದಲಾದವರು. ಸಿದ್ದರಾಮಯ್ಯ ಅವರ ರಾಜೀನಾಮೆ ಕೇಳಿರುವ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ತಮ್ಮ ನಿರ್ಧಾರವನ್ನು ಬದಲಿಸದಿದ್ದರೆ 2028ರ ಚುನಾವಣೆಯಲ್ಲಿ ಕುರುಬ ಸಮಾಜ ಹಾಗೂ ಅಹಿಂದ ವರ್ಗದ ಶಕ್ತಿಯನ್ನು ಕಾಂಗ್ರೆಸ್ಗೆ ತೋರಿಸಲಾಗುವುದು ಎಂದು ಎಚ್ಚರಿಸಿದರು. ಸಿದ್ದರಾಮಯ್ಯ ಅವರು ಜನಪರ ಯೋಜನೆಗಳ ಮೂಲಕ ಎಲ್ಲ ವರ್ಗಗಳ ವಿಶ್ವಾಸ ಗಳಿಸಿದ್ದಾರೆ. ಅವರನು ಸಿಎಂ ಸ್ಥಾನದಿಂದ ತೆಗೆದು ಹಾಕುವ ನಿರ್ಧಾರವನ್ನು ತಕ್ಷಣ ಹಿಂಪಡೆಯಬೇಕೇಂದರು.

ಪ್ರಧಾನ ಕಾರ್ಯದರ್ಶಿ ಕೆ. ಮೋಹನ್ ಮಾತನಾಡಿ, ನಿರ್ಧಾರವನ್ನು ಬದಲಾಯಿಸದಿದ್ದರೆ ಅಹಿಂದ ಹಾಗೂ ಕುರುಬ ಸಮಾಜ ಬೀದಿಗಿಳಿದು ಹೋರಾಟ ನಡೆಸಲಿದೆ ಎಂದು ಎಚ್ಚರಿಸಿದರು. ಅಲ್ಲದೆ ಕಾಂಗ್ರೆಸ್ ಪಕ್ಷಕ್ಕೆ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸುವುದಾಗಿ ಹೇಳಿದರು.

ಸಿದ್ದರಾಮಯ್ಯ ಅವರನ್ನು ದೇವರಾಜ್ ಅರಸು ಮಾದರಿಯ ಆಡಳಿತಗಾರ ಎಂದು ಹೊಗಳಿದ್ದು, ಪಂಚ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿರುವುದನ್ನು ದೇಶವೇ ಗಮನಿಸುತ್ತಿದೆ ಎಂದು ಹೇಳಿದರು. ಕುರುಬ ಸಮಾಜದ ಮುಖಂಡರು ಇದ್ದರು.

# ಪ್ರಿಯಾಂಕ್ ಖರ್ಗೆ ಅವರನ್ನು ಉಪಮುಖ್ಯಮಂತ್ರಿಯಾಗಿನೇಮಿಸಲು ಬಸವರಾಜ ದೇಶಮುಖ್ ಆಗ್ರಹ

**ಕಲಬುರಗಿ,ಮೇ.28:** ಕರ್ನಾಟಕ ಸಚಿವಾಲಯದ ಪುನರ್ರಚನೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಐಟಿ ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಕರ್ನಾಟಕದ ಉಪಮುಖ್ಯಮಂತ್ರಿಯಾಗಿ ನೇಮಿಸುವಂತೆ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವಾಧ್ಯಕ್ಷ ಮತ್ತು ಪ್ರಸಿದ್ಧ ಶಿಕ್ಷಣ ತಜ್ಞ ಬಸವರಾಜ ದೇಶಮುಖ್ ಅವರು ಇಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಒತ್ತಾಯಿಸಿದ್ದಾರೆ

ಪ್ರಿಯಾಂಕ್ ಖರ್ಗೆ ಅವರ ನೇಮಕವು ರಾಜ್ಯದ ಎಲ್ಲಾ ಅಂಶಗಳಲ್ಲಿಯೂ ಹಿಂದುಳಿದಿರುವ ಕಲ್ಯಾಣ ಕರ್ನಾಟಕ ಪ್ರದೇಶವು ಅಭಿವೃದ್ಧಿ ಹೊಂದಿದ ಜಿಲ್ಲೆಗಳಿಗೆ ಸಮನಾಗಿ ಅಭಿವೃದ್ಧಿ ಹೊಂದಲು ಸಹಾಯ ಮಾಡುತ್ತದೆ ಎಂದು

ಕಲಬುರಗಿ ನಗರದಲ್ಲಿ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಶತಮಾನೋತ್ಸವ ಆಚರಿಸಿದ ಶರಣಬಸವೇಶ್ವರ ವಿದ್ಯಾ ವರ್ಧನ ಸಂಘದ ಕಾರ್ಯದರ್ಶಿಯೂ ಆಗಿರುವ ದೇಶಮುಖ್ ಅವರು ಹೇಳಿದ್ದಾರೆ.



ಸಿದ್ಧರಾಮಯ್ಯ ಸರ್ಕಾರದಲ್ಲಿ ಸಚಿವರಾಗಿ ತಮ್ಮ ಕರ್ತವ್ಯಗಳನ್ನು ಪ್ರಿಯಾಂಕ್ ಖರ್ಗೆ ಅವರು ಧೈರ್ಯದಿಂದ ನಿರ್ವಹಿಸಿದ್ದಾರೆ . ವಿಶೇಷವಾಗಿ 371 (ಜೆ) ವಿಧಿಯ ನಿಬಂಧನೆಗಳ ಅನುಷ್ಠಾನಕ್ಕಾಗಿ ಸಂಪುಟ ಉಪ ಸಮಿತಿಯ ಅಧ್ಯಕ್ಷರಾಗಿ ಅವರು ತಮ್ಮ ಕರ್ತವ್ಯಗಳನ್ನು ಎಲ್ಲರ ಮೆಚ್ಚುಗೆಗೆ ಪಾತ್ರವಾಗುವಂತೆ ನಿರ್ವಹಿಸಿದ್ದಾರೆ. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ಹಿರಿತನದ ಪಟ್ಟಿಯಲ್ಲಿದ್ದ ಗೊಂದಲಗಳನ್ನು ಖರ್ಗೆ ಅವರು ಸರಿಪಡಿಸಿದ್ದರು. ಕೆಲವು ತಿಂಗಳ ಹಿಂದೆ ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಗೆ ಹೆಚ್ಚುವರಿ ಹಂಚಿಕೆ ಮತ್ತು ರಾಜ್ಯದಲ್ಲಿ ಖಾಲಿ ಇರುವ 15,0000 ಹುದ್ದೆಗಳನ್ನು ಭರ್ತಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಮನವೊಲಿಸುವಲ್ಲಿ ಖರ್ಗೆ ಅವರು ನೇತೃತ್ವ ವಹಿಸಿದ್ದರು. 371 (ಜೆ) ವಿಧಿಯ ಅನುಷ್ಠಾನಕ್ಕಾಗಿ ಪ್ರತ್ಯೇಕ ಸಚಿವಾಲಯದ ಮಂಜೂರಾತಿಯಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರ ಮತ್ತೊಂದು ಗಮನಾರ್ಹ ಸಾಧನೆಯೆಂದರೆ, ಈ ಪ್ರದೇಶದ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ, ವಿಶೇಷವಾಗಿ ಯುಪಿಎಸಿ ಮತ್ತು ಕೆಪಿಎಸ್ಸಿ ಪರೀಕ್ಷೆಗಳಿಗೆ ತರಬೇತಿ ನೀಡಲು ಪ್ರಬುದ್ಧ ಅಕಾಡೆಮಿಯನ್ನು ಸ್ಥಾಪಿಸಿದ್ದು ಎಂದು ಅವರು ಹೇಳಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾಗಿ ಜಿಲ್ಲೆಗೆ ಸಂಬಂಧಿಸಿದ ಎಲ್ಲಾ ಸಮಸ್ಯೆಗಳನ್ನು ಪ್ರಿಯಾಂಕ್ ಖರ್ಗೆ ಅವರು ನಿಭಾಯಿಸಿದ್ದಾರೆ.ಉಪಮುಖ್ಯಮಂತ್ರಿಯಾಗಿ ಅವರ ನೇಮಕವು ಈ ಪ್ರದೇಶದ ಅಭಿವೃದ್ಧಿಗೆ ಶುಭ ಸೂಚನೆಯಾಗಲಿದೆ. ವಿಶೇಷವಾಗಿ ಈ ಪ್ರದೇಶದ ಕೈಗಾರಿಕೀಕರಣ ಮತ್ತು ಈ ಪ್ರದೇಶದ ವಿದ್ಯಾವಂತ ಯುವಕರಿಗೆ ಉದ್ಯೋಗಾವಕಾಶವನ್ನು ಮುಕ್ತಗೊಳಿಸುವ ಬಹುಕಾಲದ ಬೇಡಿಕೆಯನ್ನು ಪೂರೈಸಲಿದೆ ಎಂದಿದ್ದಾರೆ.

# ಅಭಿವೃದ್ಧಿ ವಿಚಾರದಲ್ಲಿ ಸಂಪೂರ್ಣ ದಿವಾಳಿಯಾಗಿರುವ ಬಿಜೆಪಿ ನಾಯಕರ ವಿರುದ್ಧ ಭೀಮಣ್ಣ ಮೇಟಿ ವಾಗ್ದಾಳಿ



**ಯಾದಗಿರಿ : ಮೇ.28:**ಜಿಲ್ಲೆಯ ಅಭಿವೃದ್ಧಿ, ಮೂಲಸೌಕರ್ಯ ಹಾಗೂ ಜನಪರ ಆಡಳಿತದ ವಿಚಾರದಲ್ಲಿ ಸಂಪೂರ್ಣ ವೈಫಲ್ಯ ಅನುಭವಿಸಿರುವ ಬಿಜೆಪಿ ನಾಯಕರು ಇದೀಗ ಜನರ ಭಾವನೆಗಳನ್ನು ದಿಕ್ಕುತಪ್ಪಿಸುವ ಉದ್ದೇಶದಿಂದ ಕೃತಕ ಪ್ರತಿಭಟನೆಗಳು ಹಾಗೂ ರಾಜಕೀಯ ಪ್ರಹಸನಗಳಿಗೆ ಮುಂದಾಗಿದ್ದಾರೆ ಎಂದು ಕೆಪಿಸಿಸಿ ಪ್ರಚಾರ ಸಮಿತಿ ಉಪಾಧ್ಯಕ್ಷ ಭೀಮಣ್ಣ ಮೇಟಿ ತೀವ್ರ ವಾಗ್ದಾಳಿ ನಡೆಸಿದರು.

ನಗರದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಜಿಲ್ಲೆಯ ರಸ್ತೆ, ಕುಡಿಯುವ ನೀರು, ಒಳಚರಂಡಿ, ಆರೋಗ್ಯ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಯಾವುದೇ ದೂರದೃಷ್ಟಿಯ ಯೋಜನೆ ರೂಪಿಸದ ಬಿಜೆಪಿ ನಾಯಕರು ಈಗ ಜನಪರ ಹೋರಾಟಗಾರರಂತೆ ನಟಿಸುತ್ತಿರುವುದು ಹಾಸ್ಯಾಸ್ಪದ," ಎಂದು ಕಿಡಿಕಾರಿದರು.

"ಮೂರು ವರ್ಷಗಳ ಕಾಲ ಸಾರ್ವಜನಿಕ ಸಮಸ್ಯೆಗಳ ಕುರಿತು ಮೌನ ವಹಿಸಿದ್ದವರು ಇದೀಗ ಹಠಾತ್ ಪ್ರತಿಭಟನೆಗಳ ಹೆಸರಿನಲ್ಲಿ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳಲು ಯತ್ನಿಸುತ್ತಿದ್ದಾರೆ. ಇದು ಜನರ ಹಿತಾಸಕ್ತಿಗಾಗಿ ನಡೆಯುವ ಹೋರಾಟವಲ್ಲ; ತಮ್ಮ ವೈಫಲ್ಯಗಳನ್ನು ಮರೆಮಾಚುವ ರಾಜಕೀಯ ನಾಟಕ," ಎಂದು ಆರೋಪಿಸಿದರು.

ನಗರದ ದುಸ್ಥಿತಿಯಲ್ಲಿರುವ ರಸ್ತೆಗಳ ಕುರಿತು ಬಿಜೆಪಿ ಮಾಡುತ್ತಿರುವ ಆರೋಪಗಳಿಗೆ ತಿರುಗೇಟು ನೀಡಿದ ಅವರು, "ಇಂದು ರಸ್ತೆ ಸಮಸ್ಯೆಗಳ ಬಗ್ಗೆ ಮಾತನಾಡುತ್ತಿರುವವರೇ ನಿನ್ನೆ ಅಧಿಕಾರದಲ್ಲಿದ್ದಾಗ ಕಳಪೆ ಕಾಮಗಾರಿಗಳಿಗೆ ಮನ್ನಣೆ ನೀಡಿದ್ದರು. ಯಾದಗಿರಿಯ ಅಭಿವೃದ್ಧಿ ಹಿನ್ನಡೆಗೆ ಬಿಜೆಪಿ ಆಡಳಿತವೇ ನೇರ ಕಾರಣ," ಎಂದು ವಾಗ್ದಾಳಿ ನಡೆಸಿದರು.


ಭ್ರಷ್ಟಾಚಾರದ ಆರೋಪಗಳ ಕುರಿತು ಪ್ರತಿಕ್ರಿಯಿಸಿದ ಅವರು, "ಇಂದು ಬಹುತೇಕ ಎಲ್ಲಾ ಇಲಾಖೆಗಳು ಡಿಜಿಟಲ್ ಹಾಗೂ ಆನ್‌ಲೈನ್ ವ್ಯವಸ್ಥೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಪಾರದರ್ಶಕ ಆಡಳಿತ ವ್ಯವಸ್ಥೆಯಲ್ಲಿಯೂ ಸುಳ್ಳು ಆರೋಪಗಳನ್ನು ಸೃಷ್ಟಿಸಿ ರಾಜಕೀಯ ಲಾಭ ಪಡೆಯಲು ಬಿಜೆಪಿ ನಾಯಕರು ಯತ್ನಿಸುತ್ತಿದ್ದಾರೆ," ಎಂದು ಹೇಳಿದರು.

"ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸುವವರು ಮೊದಲು ತಮ್ಮ ಆಡಳಿತಾವಧಿಯ ಕಡತಗಳನ್ನು ಬಹಿರಂಗಪಡಿಸಲಿ. ತನಿಖೆ ಎದುರಿಸುವ ಧೈರ್ಯ ಇದ್ದರೆ ಸತ್ಯ ಜನರ ಮುಂದೆ ಹೊರಬರುತ್ತದೆ," ಎಂದು ಸವಾಲು ಹಾಕಿದರು.

ಪಕ್ಷದೊಳಗಿನ ಅಸಮಾಧಾನಗಳ ಕುರಿತೂ ಮಾತನಾಡಿದ ಅವರು, ಹಲವು ವರ್ಷಗಳಿಂದ ಪಕ್ಷಕ್ಕಾಗಿ ದುಡಿದ ಹಿರಿಯ ಹಾಗೂ ನಿಷ್ಠಾವಂತ ಮುಖಂಡರನ್ನು ಕಡೆಗಣಿಸಿ ಅವಕಾಶವಾದಿ ರಾಜಕಾರಣಕ್ಕೆ ಉತ್ತೇಜನ ನೀಡಲಾಗುತ್ತಿದೆ ಎಂದು ಆರೋಪಿಸಿದರು. ಮಾಜಿ ಅಧ್ಯಕ್ಷರಾದ ಡಾ. ನಾಯ್ಕಲ್ ಹಾಗೂ ಲಲಿತಾ ಅನಪೂರ ಅವರನ್ನು ಉದ್ದೇಶಪೂರ್ವಕವಾಗಿ ಮೂಲೆಗುಂಪು ಮಾಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಪಂ ಮಾಜಿ ಉಪಾಧ್ಯಕ್ಷ ಹಣಮೇಗೌಡ ಮರಕಲ್, ಶ್ಯಾಮಸನ್ ಮಾಳಿಕೇರಿ, ಬ್ಲಾಕ್ ಅಧ್ಯಕ್ಷ ಲಕ್ಷ್ಮೀರಡ್ಡಿ, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಸಾಬಣ್ಣ ಕೆಂಗುರಿ, ಸುರೇಶ ಮಡ್ಡಿ, ಸೇವಾದಳ ಅಧ್ಯಕ್ಷ ಲಕ್ಷ್ಮಣ ರಾಠೋಡ, ತಿಮ್ಮಣ್ಣ ನಾಯಕ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

## ಬೆಳಗುಂದಿ ಗ್ರಾಮಕ್ಕೆ ಬಸರೆಡ್ಡಿ ಅನಪುರ ಮಾನವೀಯ ಸ್ಪಂದನೆಸ್ವಂತ ಖರ್ಚಿನಲ್ಲಿ ಬೋರವೆಲ್ ಹಾಕಿಸಿ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ



**ಯಾದಗಿರಿ : ಮೇ.28:**ಜಿಲ್ಲೆಯ ಯಾದಗಿರಿ ತಾಲ್ಲೂಕಿನ ಬೆಳಗುಂದಿ ಗ್ರಾಮದಲ್ಲಿ ಕಳೆದ ಒಂದು ತಿಂಗಳಿನಿಂದ ತೀವ್ರ ಕುಡಿಯುವ ನೀರಿನ ಸಮಸ್ಯೆ ಉಂಟಾಗಿ ಗ್ರಾಮಸ್ಥರು ಸಂಕಷ್ಟದ ಜೀವನ ನಡೆಸುತ್ತಿದ್ದರು. ಬೇಸಿಗೆಯ ತಾಪಮಾನ ಹೆಚ್ಚಾದ ಹಿನ್ನೆಲೆಯಲ್ಲಿ ನೀರಿಗಾಗಿ ಮಹಿಳೆಯರು ಹಾಗೂ ಸಾರ್ವಜನಿಕರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿತ್ತು.

ಗ್ರಾಮದಲ್ಲಿ ದಿನದಿಂದ ದಿನಕ್ಕೆ ನೀರಿನ ಅಭಾವ ತೀವ್ರವಾಗುತ್ತಿದ್ದ ಹಿನ್ನೆಲೆ ಗ್ರಾಮಸ್ಥರು ಊರಿನ ಹಿರಿಯ ಮುಖಂಡರಾದ ಹಂಪನಗೌಡ ಪೊಲೀಸ ಪಾಟೀಲ ಅವರಿಗೆ ಮನವಿ ಸಲ್ಲಿಸಿ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಕೋರಿದ್ದರು.ಗ್ರಾಮಸ್ಥರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸಿದ ಹಂಪನಗೌಡ ಪೊಲೀಸ ಪಾಟೀಲ ಅವರು ಈ ಕುರಿತು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರೆಡ್ಡಿ ಅನಪುರ ಅವರಿಗೆ ದೂರವಾಣಿ ಮೂಲಕ ಮಾಹಿತಿ ನೀಡಿ ಗ್ರಾಮದಲ್ಲಿನ ಕುಡಿಯುವ ನೀರಿನ ಗಂಭೀರ ಸಮಸ್ಯೆಯನ್ನು ವಿವರಿಸಿ ಮನವಿ ಮಾಡಿದರು.

ಗ್ರಾಮದ ಜನರ ಸಮಸ್ಯೆಯನ್ನು ಅರಿತು ಮಾನವೀಯತೆ ಮೆರೆದ ಬಸರೆಡ್ಡಿ ಅನಪುರ ಅವರು ಯಾವುದೇ ವಿಳಂಬವಿಲ್ಲದೆ ತಮ್ಮ ಸ್ವಂತ ಖರ್ಚಿನಲ್ಲಿ ಬೆಳಗುಂದಿ ಗ್ರಾಮದಲ್ಲಿ ನೂತನ ಬೋರವೆಲ್ ಕೊರೆಸುವ ಕಾರ್ಯಕ್ಕೆ ಮುಂದಾಗಿ, ನಿನ್ನೆ ಬೋರವೆಲ್ ಕಾಮಗಾರಿಯನ್ನು ಪೂರ್ಣಗೊಳಿಸಿ ಗ್ರಾಮಸ್ಥರಿಗೆ ನೆರವಾಗಿದ್ದಾರೆ.

ಈ ಕಾರ್ಯದಿಂದಾಗಿ ಗ್ರಾಮದಲ್ಲಿ ತೀವ್ರವಾಗಿದ್ದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯುವ ನಿರೀಕ್ಷೆ ಮೂಡಿದ್ದು, ಗ್ರಾಮಸ್ಥರಲ್ಲಿ ಸಂತಸ ಮನೆ ಮಾಡಿದೆ. ಸಾರ್ವಜನಿಕರು ಬಸರೆಡ್ಡಿ ಅನಪುರ ಅವರ ಸಾಮಾಜಿಕ ಕಳಕಳಿ, ಜನಪರ ಬದ್ಧತೆ ಹಾಗೂ ಮಾನವೀಯ ಸೇವಾ ಮನೋಭಾವವನ್ನು ಮುಕ್ತಕಂಠದಿಂದ ಪ್ರಶಂಸಿಸಿದ್ದಾರೆ.

"ನಮ್ಮ ಸಮಸ್ಯೆಯನ್ನು ಕೇಳುತ್ತಿದ್ದಂತೆಯೇ ತಕ್ಷಣ ಸ್ಪಂದಿಸಿ ಸಹಾಯ ಹಸ್ತ ಚಾಚಿದ ಬಸರೆಡ್ಡಿ ಅನಪುರ ಅಣ್ಣಾಜಿ ಅವರು ನಿಜವಾದ ಜನನಾಯಕರು. ಗ್ರಾಮಸ್ಥರ ಸಂಕಷ್ಟಕ್ಕೆ ಸ್ಪಂದಿಸಿ ಸ್ವಂತ ವೆಚ್ಚದಲ್ಲಿ ಬೋರವೆಲ್ ಹಾಕಿಸಿಕೊಟ್ಟಿರುವುದು ಶ್ಲಾಘನೀಯ ಕಾರ್ಯ" ಎಂದು ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ.

ಗ್ರಾಮದ ಸಾರ್ವಜನಿಕರು ಹಾಗೂ ಮುಖಂಡರು ಬಸರೆಡ್ಡಿ ಅನಪುರ ಅವರಿಗೆ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.

# ಬೀದರ್‌ನ ಲಿಂಗರಾಜ ಅಪ್ಪಾ ಇಂಜನಿಯರಿಂಗ್ ಕಾಲೇಜಿನಲ್ಲಿ ಮೇ 30ರಂದು ಉದ್ಯೋಗ ಮೇಳ

**ಬೀದರ್: ಮೇ.28:**ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಆಶ್ರಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೀದರ್‌ನ ಲಿಂಗರಾಜ ಅಪ್ಪಾ ಇಂಜಿನಿಯರಿಂಗ್ ಕಾಲೇಜು ಮೇ 30ರ ಶನಿವಾರದಂದು ಕಾಲೇಜಿನ ಮುಖ್ಯ ಆವರಣದಲ್ಲಿ ಒಂದು ದಿನವಿಡೀ ಉದ್ಯೋಗ ಮೇಳವನ್ನು ಆಯೋಜಿಸಲಿದ್ದು, ಉದ್ಯೋಗಾಕಾಂಕ್ಷಿಗಳು ಉನ್ನತ ನೇಮಕಾತಿದಾರರೊಂದಿಗೆ ಮುಖಾಮುಖಿಯಾಗಿ ಭೇಟಿಯಾಗುವುದು, ವಿಭಿನ್ನ ವೃತ್ತಿ ಅವಕಾಶಗಳನ್ನು ಅನ್ವೇಷಿಸುವುದು ಮತ್ತು ಸರಿಯಾದ ರೀತಿಯ ಉದ್ಯೋಗಾವಕಾಶಗಳನ್ನು ಆಯ್ಕೆ ಮಾಡಲು ವಿವಿಧ ಕಂಪನಿಗಳ ಮಾನವ ಸಂಪನ್ಮೂಲ ವೃತ್ತಿಪರರೊಂದಿಗೆ ಸಂವಹನ ನಡೆಸುವುದು ಈ ಉದ್ಯೋಗ ಮೇಳದ ಪ್ರಮುಖ ಲಕ್ಷಣವಾಗಿದೆ.



ಈ ಉದ್ಯೋಗ ಮೇಳವು ಕಲ್ಯಾಣ ಕರ್ನಾಟಕ ಪ್ರದೇಶದ, ವಿಶೇಷವಾಗಿ ಬೀದರ್ ಜಿಲ್ಲೆಯ ಅರ್ಹ ಆಕಾಂಕ್ಷಿಗಳಿಗೆ ಹೊಸ ಉದ್ಯೋಗಾವಕಾಶಗಳನ್ನು ತೆರೆಯುತ್ತದೆ ಎಂದು ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಬಿಡುಗಡೆ ಮಾಡಿದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬಿ.ಇ. ಹಾಗೂ ಎಮ್. ಟೆಕ್. ಕೋರ್ಸಗಳನ್ನು ಪೂರ್ಣಗೊಳಿಸಿದ ಮತ್ತು ಅನುಸರಿಸುತ್ತಿರುವ ಅಭ್ಯರ್ಥಿಗಳು, ಮಾಸ್ಟರ್ ಆಫ್ ಕಂಪ್ಯೂಟರ್ ಅಪ್ಲಿಕೇಶನ್ (MCA), ಮಾಸ್ಟರ್ ಆಫ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ (BA), ಬ್ಯಾಚುಲರ್ ಆಫ್ ಕಂಪ್ಯೂಟರ್ ಅಪ್ಲಿಕೇಶನ್ (BCA), ಬಿ.ಕಾಂ, ಬಿಎಸ್ಸಿ, ಬ್ಯಾಚುಲರ್ ಆಫ್ ಬಿಸಿನೆಸ್ ಮ್ಯಾನೇಜ್‌ಮೆಂಟ್ (BBM), ಬ್ಯಾಚುಲರ್ ಆಫ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ (BBA), ಮತ್ತು ಐಟಿಐ ಹಾಗೂ ವಿವಿಧ ಡಿಪ್ಲೋಮಾ ಕೋರ್ಸಗಳನ್ನು ಪೂರ್ಣಗೊಳಿಸಿದ ಮತ್ತು ಅನುಸರಿಸುತ್ತಿರುವ ವಿದ್ಯಾರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ ಎಂದು ತಿಳಿಸಿದ್ದಾರೆ.

ಸುಮಾರು 40ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಉದ್ಯೋಗ ಮೇಳದಲ್ಲಿ ತಮ್ಮ ಭಾಗವಹಿಸುವಿಕೆಯನ್ನು ದೃಢೀಕರಿಸಿವೆ ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ. ವಿನಿತಾ ಪಾಟೀಲ್ ತಿಳಿಸಿರುವರು. ಅವುಗಳಲ್ಲಿ ಪ್ರಮುಖವಾದವುಗಳಾದ ಇನ್ಫೋಸಿಸ್, ಟೆಕ್ ಮಹೀಂದ್ರಾ, ಸದರ್ಲ್ಯಾರ್‌ಂಡ್, ಕ್ಯಾಪ್ಯಾಕ್ಸ್ ಸಲ್ಯೂಷನ್ಸ್, ಟಫೆ, ಹುಂಡೈ, 24X7 ಎಐ, ಮತ್ತು ಇತರ ಸಾಫ್ಟ್‌ವೇರ್ ಮತ್ತು ಹಾರ್ಡವೇರ್ ಪ್ರಮುಖ ಕಂಪನಿಗಳು ಸೇರಿವೆ. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಳ್ಳಬಹುದು ಅಥವಾ 30ರಂದು ಕಾಲೇಜಿನ ಆವರಣದ ಸ್ಥಳದಲ್ಲಿಯೇ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ವಿವರಗಳಿಗೆ ಡಾ. ವಿನಿತಾ ಪಾಟೀಲ್ ಅವರ ಮೊಬೈಲ್ ಸಂಖ್ಯೆ 8792506036 ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಹಾಗೂ ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿಗಳಾದ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಅವರು ಲಿಂಗರಾಜ ಅಪ್ಪಾ ಇಂಜಿನಿಯರಿಂಗ್ ಕಾಲೇಜಿನ ತಂಡಕ್ಕೆ ಈ ಉದ್ಯೋಗ ಮೇಳ ಆಯೋಜಿಸಿರುವುದಕ್ಕೆ ಆಶೀರ್ವದಿಸಿ ಅಭಿನಂದನೆ ಸಲ್ಲಿಸಿದ್ದಾರೆ.

# ರೈತರಿಗೆ ಗುಣಮಟ್ಟದ ಬೀಜ ಒದಗಿಸಿ: ಶಾಸಕ ಚವ್ಹಾಣ



**ಔರಾದ್ :ಮೇ.28:** 2026-27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಶಾಸಕ ಪ್ರಭು ಬಿ.ಚವ್ಹಾಣ ಅವರು ರೈತ ಸಂಪರ್ಕ ಕೇಂದ್ರದಲ್ಲಿ ಮೇ.27 ರಂದು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ವರ್ಷ ಮುಂಗಾರು ಶೀಘ್ರ ಬರುವ ಮುನ್ಸೂಚನೆ ಇರುವುದರಿಂದ ರೈತರಿಗೆ ಬಿತ್ತನೆ ಸಮಯಕ್ಕೆ ಬೀಜಗಳು ಲಭ್ಯವಾಗಬೇಕು ಎನ್ನುವ ಉದ್ದೇಶದಿಂದ ಮುಂಚಿತವಾಗಿ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಲಾಗುತ್ತಿದೆ. ಮುಂಗಾರು ಹಂಗಾಮಿಗೆ ಅಗತ್ಯವಿರುವ ವಿವಿಧ ಬೆಳೆಗಳ ಬೀಜಗಳನ್ನು ಕೃಷಿ ಇಲಾಖೆಯ ಮೂಲಕ ವಿತರಿಸಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ನಿಗದಿತ ದರಕ್ಕಿಂತ ಹೆಚ್ಚು ಬೆಲೆಗೆ ಮಾರಾಟ ಮಾಡಬಾರದು. ಈ ಕುರಿತು ಅಧಿಕಾರಿಗಳು ಹಾಗೂ ಮಾರಾಟಗಾರರ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು. ರೈತರ ಸಂಪರ್ಕ ಕೇಂದ್ರಗಳಲ್ಲಾಗಲಿ, ಖಾಸಗಿ ಕೇಂದ್ರಗಳಲ್ಲಾಗಲಿ ಯಾವುದೇ ಕಾರಣಕ್ಕೂ ರೈತರಿಂದ ಹೆಚ್ಚುವರಿ ಹಣ ವಸೂಲಿ ಮಾಡುವಂತಿಲ್ಲ. ಇಂತಹ ಘಟನೆಗಳು ಎಲ್ಲಿಯಾದರೂ ನಡೆದರೆ ಅಂಥವರ ವಿರುದ್ಧ ಮುಲಾಜಿಲ್ಲದೇ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದರು. ಬಿತ್ತನೆ ಬೀಜ ಅಥವಾ ರಸಗೊಬ್ಬರ ನೀಡಿದ ನಂತರ ರೈತರಿಗೆ ಕಡ್ಡಾಯವಾಗಿ ರಸೀದಿ ನೀಡಬೇಕು ಎಂದು ನಿರ್ದೇಶನ ನೀಡಿದರು.

ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ದರದ ಪಟ್ಟಿಯನ್ನು ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ಸ್ಪಷ್ಟವಾಗಿ ಕಾಣುವಂತೆ ಕಡ್ಡಾಯವಾಗಿ ಪ್ರದರ್ಶಿಸಬೇಕು. ಯಾವುದೇ ರೈತರಿಗೆ ದರದ ಬಗ್ಗೆ ಗೊಂದಲ ಅಥವಾ ಅನ್ಯಾಯವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ರೈತರಿಗೆ ಪೂರೈಸುವ ಬಿತ್ತನೆ ಬೀಜಗಳು ಉತ್ತಮ ಗುಣಮಟ್ಟದಿಂದ ಕೂಡಿರಬೇಕು. ಈ ಬಗ್ಗೆ ಅಧಿಕಾರಿಗಳು ರೈತರಿಗೆ ಕೊಡುವ ಮುನ್ನ ಪರಿಶೀಲಿಸಬೇಕು. ಈ ವಿಷಯದಲ್ಲಿ ಯಾವುದೇ ರೀತಿಯ ದೂರುಗಳಿಗೆ ಅವಕಾಶ ಕೊಟ್ಟಲ್ಲಿ ಸುಮ್ಮನಿರುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಪ್ರತಿ ವರ್ಷ ಇಲ್ಲಿಂದ ಮಹಾರಾಷ್ಟ್ರ ಹಾಗೂ ತೆಲಂಗಾಣ ರಾಜ್ಯಗಳಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಅಕ್ರಮ ಸಾಗಾಟ ನಡೆಯುತ್ತಿರುವುದು ಗಮನಕ್ಕೆ ಬಂದಿದೆ. ಗಡಿ ಭಾಗಗಳಲ್ಲಿ ಅಧಿಕಾರಿಗಳು ವಿಶೇಷ ತಪಾಸಣೆ ನಡೆಸಿ, ಅಕ್ರಮ ಸಾಗಾಟವನ್ನು ಸಂಪೂರ್ಣವಾಗಿ ತಡೆಗಟ್ಟಬೇಕು. ನಮ್ಮ ರೈತರಿಗೆ ಬಂದ ಬಿತ್ತನೆ ಬೀಜ, ರಸಗೊಬ್ಬರ ಅನ್ಯರ ಪಾಲಾಗಬಾರದು. ನಮ್ಮ ರೈತರಿಗೆ ಯಾವುದೇ ರೀತಿಯ ಅನ್ಯಾಯವಾಗಬಾರದು ಎಂದು ಖಡಕ್ ಸೂಚನೆ ನೀಡಿದರು.

ಔರಾದ(ಬಿ) ಕ್ಷೇತ್ರದಲ್ಲಿ ಹೆಚ್ಚಾಗಿ ಬೆಳೆಸಲಾಗುವ ಸೋಯಾ ಬೀನ್ ಹಾಗೂ ಮತ್ತಿತರೆ ಬೆಳೆಗಳ ಬಿತ್ತನೆ ಬೀಜಗಳನ್ನು ಸಮರ್ಪಕವಾಗಿ ಪೂರೈಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದ್ದೇನೆ. ಕ್ಷೇತ್ರದ ಪ್ರತಿಯೊಬ್ಬ ರೈತರಿಗೂ ಅಗತ್ಯ ಪ್ರಮಾಣದ ಬೀಜಗಳು ಸಿಗುವಂತೆ ಸಮರ್ಪಕ ವ್ಯವಸ್ಥೆ ಮಾಡಬೇಕು. ಯಾವುದೇ ರೈತ ಬೀಜಕ್ಕಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಎಲ್ಲ ಗ್ರಾಮಗಳಲ್ಲಿ ಕಡ್ಡಾಯವಾಗಿ ಡೊಂಗೂರ ಸಾರಿಸಿ ಬಿತ್ತನೆ ಬೀಜ ವಿತರಿಸುವ ದಿನಾಂಕದ ಬಗ್ಗೆ ತಿಳಿಸಬೇಕು. ರೈತ ಸಂಪರ್ಕ ಕೇಂದ್ರಗಳು ರೈತರ ಸ್ನೇಹಿಯಾಗಿ ಕೆಲಸ ಮಾಡಬೇಕು. ರೈತರಿಗೆ ಯಾವುದೇ ರೀತಿಯ ಅನ್ಯಾಯವಾದರೆ ಸುಮ್ಮನಿರುವುದಿಲ್ಲ. ತಪ್ಪಿತಸ್ಥರು ಯಾರೇ ಇರಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಸಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಧೂಳಪ್ಪ ಪ್ರಾಸ್ತಾವಿಕ ಮಾತನಾಡಿ, ಸೋಯಾಬೀನ್ 36,100 ಕ್ವಿಂಟಾಲ್ ಬೇಡಿಕೆಯ ಪೈಕಿ 31,218 ಕ್ವಿಂಟಾಲ್ ಬಂದಿದೆ. ಹೆಸರು 300 ಕ್ವಿಂಟಾಲ್ ಪೈಕಿ 220 ಕ್ವಿಂಟಾಲ್ ಬಂದಿದೆ. ಹೆಸರು 100 ಕ್ವಿಂಟಾಲ್ ಪೈಕಿ 25 ಕ್ವಿಂಟಾಲ್ ಹಾಗೂ 50 ಕ್ವಿಂಟಾಲ್ ಪೈಕಿ 13 ಕ್ವಿಂಟಾಲ್ ಬಂದಿದೆ. ಉಳಿದ ಎಲ್ಲ ಬಿತ್ತನೆ ಬೀಜಗಳು ಅಗತ್ಯಕ್ಕೆ ಅನುಗುಣವಾಗಿ ದಾಸ್ತಾನು ಮಾಡಿಕೊಳ್ಳಲಾಗಿದೆ. ರೈತರು ಆತಂಕಪಡಬೇಕಿಲ್ಲ ತಮಗೆ ತಿಳಿಸಿದ ದಿನಾಂಕದಂದು ಬಿತ್ತನೆ ಬೀಜ ಪಡೆಯಬೇಕು ಎಂದು ತಿಳಿಸಿದರು.

ಎಲ್ಲ ರೈತರು ಒಂದೇ ಬೆಳೆಗೆ ಮೊರೆ ಹೋಗದೆ ಬೇರೆ-ಬೇರೆ ಬೆಳೆಗಳನ್ನು ಬಿತ್ತನೆ ಮಾಡಿದರೆ ಆರ್ಥಿಕ ಸಂಕಷ್ಟದಿಂದ ತಪ್ಪಿಸಿಕೊಳ್ಳಬಹುದು. ಹಾಗೆಯೇ 80 ಎಂ.ಎಂ ಮಳೆಯಾದ ನಂತರವೇ ಸೋಯಾಬೀನ್ ಬಿತ್ತನೆ ಮಾಡಬೇಕು. ದೊಡ್ಡ ಟ್ರ್ಯಾಕ್ಟರ್‌ಗಳಿಂದ ಹೆಚ್ಚಿನ ಆಳಕ್ಕೆ ಬಿತ್ತನೆ ಮಾಡುವುದರಿಂದ ಮೊಳಕೆ ಒಡೆಯುವುದು ಕಷ್ಟ. ಹಾಗಾಗಿ ರೈತರು ಅಗತ್ಯ ಮುನ್ನೆಚ್ಚರಿಕೆಯೊಂದಿಗೆ ಬಿತ್ತನೆ ಕೈಗೊಳ್ಳಬೇಕು. ಎಲ್ಲ ಬೆಳೆಗಳಿಗೂ ತಪ್ಪದೇ ವಿಮೆ ಮಾಡಿಸಬೇಕು ಎಂದು ರೈತರಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಸಂತೋಷ ಹಜಾರೆ, ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಕೃಷಿಕ ಸಮಾಜದ ಸದಸ್ಯ ಗೋವಿಂದರಾವ ಇಂಗಳೆ, ಸಚಿನ ರಾಠೋಡ, ಸಂಜು ವಡೆಯಾರ್, ಬಸವರಾಜ ಹಳ್ಳೆ ಸೇರಿದಂತೆ ಕೃಷಿ ಇಲಾಖೆಯ ಅಧಿಕಾರಿಗಳು, ರೈತ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ನಂತರ ಭಂಡಾರಕುಮಟಾ ರೈತ ಸಂಪರ್ಕ ಕೇಂದ್ರದಲ್ಲಿ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ಅವಿಭಕ್ತ ಕುಟುಂಬದಲ್ಲಿ ಜೀವನ ಸಾಗಿಸಿ: ಬಸವಲಿಂಗ ಅವಧೂತರು



**ಬೀದರ್: ಮೇ.28:**ಒಂದೇ ಮನೆಯಲ್ಲಿ ಜೀವನ ಸಾಗಿಸಿ ಸಂಭಂಧ ವೃದ್ದಸಿಕೋಳ್ಳಿ ಮುಂದಿನ ಪೀಳಿಗೆಗೆ ಮಾರ್ಗದರ್ಶಿಯಾಗಿ ಎಂದು ಜಹೀರಾಬಾದ್ ತಾಲ್ಲೂಕಿನ ಮಲ್ಲಯ್ಯಗಿರಿ ಹಾಗೂ ದೇಗಲಮಡಿ ಆಶ್ರಮದ ಪೀಠಾಧಿಪತಿ ಡಾ. ಬಸವಲಿಂಗ ಅವಧೂತರು ನುಡಿದರು.
ಬೀದರ ತಾಲ್ಲೂಕಿನ ಕೋಳಾರ (ಕೆ) ಗ್ರಾಮದಲ್ಲಿ ಆಯೋಜಿಸಿದ್ದ ಶ್ರೀ ಸಾಯಿ ಬಾಬಾ ಮಂದಿರ 12ನೇ ಜಾತ್ರಾ ಮಹೋತ್ಸವ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದರು ಇಂದಿನ ಮಕ್ಕಳಿಗೆ ಮನೆಯಲ್ಲಿ ಸಂಸ್ಕಾರ ಸಿಗದ ಕಾರಣ ಮದುವೆಯಾದ ಕೆಲವೇ ದಿನಗಳಲ್ಲಿ ವಿಚ್ಛೆದವಾಗುತ್ತಿವೆ ಎಂದು ವಿಷಾದ ವ್ಯಕ್ತ ಪಡಿಸಿದರು.

ಭಾರತ ದೇಶದಲ್ಲಿ ಮಹಿಳಿಯರಿಗೆ ವಿಶೇಷ ಸ್ಥಾನ ಇದೆ. ದೇವತೆ ಎಂದಲ್ಲೂ ಪೂಜಿಸುತ್ತಾರೆ ಎಂದು ಹೇಳಿದರು. ಸಾಯಿ ಬಾಬಾ ಅವರಲ್ಲಿ ಒಂದು ದೊಡ್ಡ ಶಕ್ತಿ ಇತ್ತು ಅದನ್ನು ಒಳ್ಳೆದಕ್ಕೆ ಮಾತ್ರ ಬಳಸುತ್ತಿದ್ದರು ಆವರೊಬ್ಬ ಪವಾಡ ಪುರುಷರಾಗಿದ್ದರು ಎಂದು ಹೇಳಿದರು. ಇಂತಹ ಜಾತ್ರಾ ಮಹೋತ್ಸವಗಳು ನಡೆಯುವುದರಿಂದ ಸಂಬಂಧಗಳು ವೃದ್ದಿಯಾಗುತ್ತವೆ ಎಂದು ನುಡಿದರು.

ಯಾರೊಬ್ಬರು ಒಳ್ಳೆಯದನ್ನು ಹೇಳಿದರೆ ಸ್ವೀಕರಿಸುವ ಗುಣ ಎಲ್ಲರೂ ಹೊಂದಬೇಕು. ಶರಣರು, ಸಂತರು, ಪೂಜ್ಯರ ವಾಣಿಗಳನ್ನು ಆಲಿಸಬೇಕು, ತಂದೆ ತಾಯಿಯ ಜೀವಿತವರೆಗೂ ಅವರ ಸೇವೆ ಮಾಡಲೇ ಬೇಕು ಎಂದರು.

ಒತ್ತಡದ ಜೀವನ ಶೈಲಿಯಿಂದಾಗಿ ಅನೇಕ ರೋಗಗಳಿಗೆ ಮನುಷ್ಯ ಒಳಗಾಗುತ್ತಿದ್ದಾನೆ. ಒತ್ತಡದಿಂದ ಮುಕ್ತಿ ಹಾಗೂ ಸುಂದರ ಜೀವನ ಕಟ್ಟಿಕೊಳ್ಳಲು ಪ್ರವಚನ, ಪುರಾಣ ಆಲಿಸಬೇಕು.ಎಂದು ತಿಳಿಸಿದರು.

ವೈದ್ಯ ಡಾ. ಶ್ರೇಯಶ್ ಹೆಬ್ಬಾಳಕರ್ ಮಾತನಾಡುತ್ತಾ ಡಾ. ಬಸವಲಿಂಗ ಅವಧೂತರು ಪವಾಡ ಪುರುಷರಾಗಿದ್ದಾರೆ. ಇವರನ್ನು ಭಕ್ತಿಯಿಂದ ನಡೆದುಕೊಂಡರೆ ಬಂದಿರುವ ತೊಂದರೆಗಳು ತಾನ್ನಾಗಿಯೇ ದೂರವಾಗುತ್ತವೆ ಎಂದು ಹೇಳಿದರು.

ಇದಕ್ಕೂ ಮುನ್ನ ಶ್ರೀ ಸಾಯಿ ಬಾಬಾ ಮೂರ್ತಿಗೆ ಅವಧೂತರು ಪೂಜ್ಯ ಸಲ್ಲಿಸಿದರು ದೇವಸ್ಥಾನದ ದೀಲಿಪ ವಡಗಾಂವೆ, ಅಮರ ವಡಗಾಂವೆ, ಅನೀಲ ಕೋಟೆ, ಶಂಕರ ಸಿಂದೆ, ಸಂತೋಷ ಸ್ವಾಮಿ, ಶಂಕ್ರಣ್ಣಾ ಕೋಳಾರ, ರಾಹುಲ್, ಮೊದಲಾದವರು ಇದ್ದರು.

# ಗ್ರಾಮ ಪಂಚಾಯತ್ ನೌಕರರ ವಿವಿಧ ಬೇಡಿಕೆ ಈಡೇರಿಸಲು ಮನವಿ



**ಬೀದರ: ಮೇ.28:**ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘ (ಸಿ.ಐ.ಟಿ.ಯು. ಸಂಯೋಜಿತ) ಜಿಲ್ಲಾ ಸಮಿತಿ ವತಿಯಿಂದ ಗ್ರಾಮ ಪಂಚಾಯತ್ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

ಜಿಲ್ಲೆಯ ಗ್ರಾಮ ಪಂಚಾಯತಿಗಳಲ್ಲಿ ಕರವಸೂಲಿಗಾರರು, ವಾಟರ್‌ಮೆನ್, ಸಿಪಾಯಿ ಹಾಗೂ ಸ್ವಚ್ಛತಾಗಾರರು ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದರೂ, ಸೇವಾ ಜೇಷ್ಠತೆಯಲ್ಲಿ ಅನ್ಯಾಯ ನಡೆಯುತ್ತಿದೆ ಎಂದು ಸಂಘದ ಮುಖಂಡರು ಆರೋಪಿಸಿದ್ದಾರೆ. ಹಿರಿಯ ಸಿಬ್ಬಂದಿಯನ್ನು ಕಡೆಗಣಿಸಿ, ಹೊಸದಾಗಿ ಬಂದವರಿಗೆ ಜೇಷ್ಠತಾ ಪಟ್ಟಿಯಲ್ಲಿ ಆದ್ಯತೆ ನೀಡಲಾಗುತ್ತಿದೆ ಎಂದು ದೂರಿದ್ದಾರೆ.

ಮನವಿಯಲ್ಲಿ 2025-26ನೇ ಸಾಲಿನ ಕರವಸೂಲಿಗಾರರ ಅಂತಿಮ ಜೇಷ್ಠತಾ ಪಟ್ಟಿಯಲ್ಲಿ ತಿದ್ದುಪಡಿ ಮಾಡುವುದು, ಜೇಷ್ಠತಾ ಪಟ್ಟಿ ಸರಿಪಡಿಸುವವರೆಗೆ ಮುಂಬಡ್ತಿ ಹಾಗೂ ನೇಮಕಾತಿ ಪ್ರಕ್ರಿಯೆ ಸ್ಥಗಿತಗೊಳಿಸುವುದು, ಅನುಮೋದನೆ ಬಾಕಿ ಉಳಿದ ಸಿಬ್ಬಂದಿಗೆ ಅನುಮೋದನೆ ನೀಡುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ.

ಇದೇ ವೇಳೆ 10ನೇ ತರಗತಿ ಪಾಸಾದ ವಾಟರ್‌ಮೆನ್ ಸಿಬ್ಬಂದಿಗೆ ಕರವಸೂಲಿಗಾರರು ಹಾಗೂ ಡಿ.ಇ.ಓ ಹುದ್ದೆಗಳಿಗೆ ಮುಂಬಡ್ತಿ ನೀಡಬೇಕು, ಸ್ವಚ್ಛ ವಾಹಿನಿ ಸಿಬ್ಬಂದಿಗೆ ಪ್ರತಿ ತಿಂಗಳು ವೇತನ ಪಾವತಿಸಬೇಕು, ಮರಣ ಹೊಂದಿದ ಅಥವಾ ನಿವೃತ್ತಿ ಪಡೆದ ಸಿಬ್ಬಂದಿಗಳ ಕುಟುಂಬ ಸದಸ್ಯರಿಗೆ ಅನುಕಂಪ ಆಧಾರಿತ ನೇಮಕಾತಿ ನೀಡಬೇಕು ಎಂದು ಒತ್ತಾಯಿಸಲಾಗಿದೆ.

ನಿವೃತ್ತಿ ಹೊಂದಿದ ಸಿಬ್ಬಂದಿಗೆ ಉಪದಾನ ವ್ಯವಸ್ಥೆ ಕಲ್ಪಿಸುವಂತೆ ಸಹ ಮನವಿಯಲ್ಲಿ ಆಗ್ರಹಿಸಲಾಗಿದೆ.ಸಮಸ್ಯೆಗಳನ್ನು ಶೀಘ್ರ ಬಗೆಹರಿಸದಿದ್ದಲ್ಲಿ ಧರಣಿ ಸತ್ಯಾಗ್ರಹ ಮುಂದುವರಿಸಲಾಗುವುದು ಎಂದು ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘದ ರಾಜ್ಯಧ್ಯಕ್ಷರಾದ ಎಂ.ಬಿ ನಾಡಗೌಡ ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಜೀವನ ಕನ್ನಳ್ಳೆ, ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಿಪ್ಪಳಗಾಂವ, ಪ್ರಭು ಸಂತೋಷಕರ್, ಶ್ರೀದೇವಿ ಚೌಡೆ, ಧನರಾಜ ಗುಳೆ, ವಿಜಯಕುಮಾರ ಜನವಾಡಾ, ಹಾಗೂ ನರಸಿಂಗ ಹಳೆಯೆಂಬರ್ ಉಪಸ್ಥಿತರಿದ್ದರು.

# ಡಾ. ರಾಜಶೇಖರ ಶಿವಾಚಾರ್ಯರ ನೇಮಕ ಎತ್ತಿ ಹಿಡಿದ ನ್ಯಾಯಾಲಯ

**ಬೀದರ್: ಮೇ.28:** ಹುಮನಾಬಾದ್ ತಾಲ್ಲೂಕಿನ ಬೇಮಳಖೇಡದ ಹಿರೇಮಠ ಸಂಸ್ಥಾನದ ಉತ್ತರಾಧಿಕಾರಿಯಾಗಿ ಡಾ. ರಾಜಶೇಖರ ಶಿವಾಚಾರ್ಯರನ್ನು ನೇಮಕ ಮಾಡಿರುವುದನ್ನು ಹುಮನಾಬಾದನ ಪ್ರಧಾನ ಸಿವಿಲ್ ಹಾಗೂ ಜೆಎಂಎಸ್‌ಸಿ ನ್ಯಾಯಾಲಯ ಎತ್ತಿ ಹಿಡಿದಿದೆ.

ಮಠದ ಉತ್ತರಾಧಿಕಾರಿ ವಿಷಯಕ್ಕೆ ಸಂಬಂಧಿಸಿದಂತೆ ಉಚ್ಚಾಟಿತ ಶ್ರೀ ಚಂದ್ರಶೇಖರ ಶಿವಾಚಾರ್ಯರು ಹೂಡಿದ ದಾವೆಯನ್ನು ವಜಾಗೊಳಿಸಿದೆ.



ಉಚ್ಚಾಟಿತ ಶ್ರೀ ಚಂದ್ರಶೇಖರ ಶಿವಾಚಾರ್ಯರು ಗುರುಪಾದ ಶಿವಾಚಾರ್ಯ ಮತ್ತು ಡಾ. ರಾಜಶೇಖರ ಶಿವಾಚಾರ್ಯರ ವಿರುದ್ಧ ದಾವೆ ಹೂಡಿದ್ದರು. ವಿವಾದ ಸುಮಾರು 9 ವರ್ಷಗಳಿಂದ ನಡೆದಿತ್ತು. ಪ್ರಕರಣದ ವಾದ-ಪ್ರತಿವಾದವನ್ನು ಆಲಿಸಿದ ನ್ಯಾಯಾಧೀಶರು, ಏಪ್ರಿಲ್ 27 ರಂದು ತೀರ್ಪು ನೀಡಿದ್ದಾರೆ ಎಂದು ಡಾ. ರಾಜಶೇಖರ ಶಿವಾಚಾರ್ಯರು ತಿಳಿಸಿದ್ದಾರೆ.
ಉತ್ತರಾಧಿಕಾರಿ ವಿಷಯಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ ನೀಡಿದ ತೀರ್ಪಿನಿಂದ ಸಮಾಧಾನವಾಗಿದೆ. ಸತ್ಯಕ್ಕೆ ಮತ್ತು ಧರ್ಮಕ್ಕೆ ಜಯವಾಗಿದೆ ಎಂದು ಡಾ. ರಾಜಶೇಖರ ಶಿವಾಚಾರ್ಯ ತಿಳಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE